ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 136 ಸಂಚಿಕೆ- 136 | PAGE-8 ಪುಟ-8 | ಮಂಗಳವಾರ 08.07.2025 | RS.2/- ಬೆಲೆ 2/-

# ಹಠಾತ್ ಸಾವು 'ಅಧಿಸೂಚಿತ ಕಾಯಿಲೆ'

## ಹೃದಯಾಘಾತದಿಂದ ಮೃತಪಟ್ಟವರ ಮರಣೋತ್ತರ ಪರೀಕ್ಷೆ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.7: ರಾಜ್ಯ ಸರ್ಕಾರ ಹಠಾತ್ ಸಾವುಗಳನ್ನು "ಅಧಿಸೂಚಿತ ಕಾಯಿಲೆ" ಎಂದು ಸೋಮವಾರ ಘೋಷಿಸಿದ್ದು, ಅಂತಹ ಪ್ರಕರಣಗಳಲ್ಲಿ ಮರಣೋತ್ತರ ಪರೀಕ್ಷೆ ನಡೆಸಲು ನಿರ್ಧರಿಸಿದೆ.

ರಾಜ್ಯದಲ್ಲಿ 15 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಸಿನ ಜನರನ್ನು ಹೆಚ್ಚಿನ ತಪಾಸಣೆಗೆ ಒಳಪಡಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಹೇಳಿದ್ದಾರೆ.

ರಾಜ್ಯದಲ್ಲಿ, ವಿಶೇಷವಾಗಿ ಹಾಸನ ಜಿಲ್ಲೆಯಲ್ಲಿ ಹೃದಯಾಘಾತದಿಂದ ಸರಣಿ ಸಾವು ಹಿನ್ನೆಲೆಯಲ್ಲಿ ಇಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಆರೋಗ್ಯ ಸಚಿವರು, ಹೃದಯಾಘಾತದಿಂದ ಮೃತಪಟ್ಟವರ ಮರಣೋತ್ತರ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗುವುದು ಎಂದು ಹೇಳಿದರು.

"ಹಠಾತ್ ಸಾವುಗಳನ್ನು ಅಧಿಸೂಚಿತ ಕಾಯಿಲೆ ಎಂದು ಘೋಷಿಸಲು ನಾವು ನಿರ್ಧರಿಸಿದ್ದೇವೆ. ಆಸ್ಪತ್ರೆಗಳ ಹೊರಗೆ ಹಠಾತ್ ಸಾವು ಸಂಭವಿಸಿದರೆ ಅದನ್ನು ಸರ್ಕಾರಕ್ಕೆ ತಿಳಿಸಬೇಕು" ಎಂದು ಸಚಿವರು ಹೇಳಿದರು.

"ಹುಟ್ಟಿನಿಂದಲೇ ರೋಗಗಳನ್ನು ಹೊಂದಿರುವ ಜನ ಇರುವುದರಿಂದ", ಸುಮಾರು 15 ವರ್ಷ ವಯಸ್ಸಿನ



ಮಕ್ಕಳು ಸೇರಿದಂತೆ ಹೆಚ್ಚಿನ ಜನರನ್ನು ವರ್ಷಕ್ಕೊಮ್ಮೆಯಾದರೂ ತಪಾಸಣೆ ಮಾಡುವ ಅಗತ್ಯವನ್ನು ಸಚಿವರು ಒತ್ತಿ ಹೇಳಿದರು.

ಹೃದಯಾಘಾತ ಮತ್ತು ಹಠಾತ್ ಸಾವುಗಳಿಗೆ ಕಾರಣವಾಗುವ ರೋಗಗಳ ಕುರಿತು ಪಠ್ಯಪುಸ್ತಕಗಳಲ್ಲಿ ಪ್ರತ್ಯೇಕ ಪಠ್ಯ ಅಳವಡಿಸಲು ಶಿಕ್ಷಣ ಇಲಾಖೆಗೆ ಸೂಚಿಸಲಾಗುವುದು ಎಂದು ಸಚಿವರು ತಿಳಿಸಿದರು.

ಸಿಪಿಆರ್ ಕುರಿತು ಜನರಿಗೆ ತರಬೇತಿ ನೀಡಲು ಸಹ ನಿರ್ಧರಿಸಲಾಗಿದೆ. ಇದಲ್ಲದೆ, ರಾಜ್ಯದ 86 ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯನ್ನು ಈ ವರ್ಷ ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಗೂ ವಿಸ್ತರಿಸಲಾಗುವುದು ಎಂದು ಅವರು ಹೇಳಿದರು.

ಹಠಾತ್ ಹೃದಯಾಘಾತದಿಂದ ಬಳಲುತ್ತಿರುವ ಜನರಿಗೆ ಚಿಕಿತ್ಸೆ ನೀಡುವ ಗುರಿಯನ್ನು ಈ ಯೋಜನೆ ಹೊಂದಿದೆ. ಹಠಾತ್ ಹೃದಯಾಘಾತ ಮತ್ತು ಕೋವಿಡ್ -19 ಸೋಂಕು ಮತ್ತು ಲಸಿಕೆಯೊಂದಿಗೆ ಅವುಗಳ ಸಂಭಾವ್ಯ ಸಂಬಂಧದ ತನಿಖೆಗೆ ರಾಜ್ಯ ಸರ್ಕಾರ ರಚಿಸಿದ್ದ ತಜ್ಞರ ಸಮಿತಿಯ ವರದಿಯನ್ನು ಉಲ್ಲೇಖಿಸಿ, ಹೃದಯಾಘಾತಕ್ಕೆ ಕೋವಿಡ್ ಲಸಿಕೆ ಕಾರಣವಲ್ಲ ಎಂದು ದಿನೇಶ್ ಗೂಂಡುರಾವ್ ಹೇಳಿದರು.



ತಾಳಿಕೋಟಿ: ಪಟ್ಟಣದ ಶ್ರೀ ಖಾಸ್ಗತೇಶ್ವರ ಮಠದ ಜಾತ್ರಾ ಮಹೋತ್ಸವ ಅಂಗವಾಗಿ ಐತಿಹಾಸಿಕ ಗೋಪಾಲ ಕಾವಲಿ (ಮೊಸರು ಗಡಿಗೆ ಒಡೆಯುವ) ಕಾರ್ಯಕ್ರಮಕ್ಕೆ ಪರಮಪೂಜ್ಯ ಸಿದ್ಧಲಿಂಗ ದೇವರು ಸೋಮವಾರ ಬೆಳಿಗ್ಗೆ ಚಾಲನೆ ನೀಡಿದರು. ಶ್ರೀ ಮಠದ ಮುಖ್ಯಸ್ಥ ಮುರುಗೇಶ ವಿರಕ್ತಮಠ ಹಾಗೂ ಅಪಾರ ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕಾಂಗ್ರೆಸ್ ಹೈಕಮಾಂಡ್ ನಮಗೆ ದೇವಸ್ಥಾನವಿದ್ದಂತೆ: ಡಿಕೆಶಿ

ಮಲ್ಲಮ್ಮನುಡಿವಾರ್ತೆಬೆಂಗಳೂರು:ಜು.7: ಕಾಂಗ್ರೆಸ್ ಹೈಕಮಾಂಡ್ ನಮಗೆ ದೇವಸ್ಥಾನ ಇದ್ದ ಹಾಗೆ, ಸಮಯ ಸಿಕ್ಕರೆ ಹೈಕಮಾಂಡ್ ಭೇಟಿಯಾಗಿ ಅವರಿಗೆ ಕೈ ಮುಗಿದು ಬರುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.ಎರಡು ದಿನ ದೆಹಲಿ ಪ್ರವಾಸ ಕೈಗೊಳ್ಳುತ್ತಿರುವ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಎತ್ತಿನಹೊಳೆ ಯೋಜನೆ ಸಂಬಂಧಿಸಿದಂತೆ ಕೇಂದ್ರ ಅರಣ್ಯ ಸಚಿವರನ್ನು ಭೇಟಿಯಾಗಬೇಕು.



ತುಮಕೂರು ಮತ್ತು ಹಾಸನ ವಿಚಾರದಲ್ಲಿ ಕೇಂದ್ರ ಅನುಮತಿ ಕೊಡಬೇಕಿದೆ. ಈ ವಿಷಯದ ಕುರಿತು ಚರ್ಚೆಗೆ ಅವಕಾಶ ಕೊಟ್ಟಿದ್ದಾರೆ. ಅರಣ್ಯ ಸಚಿವರ ಜೊತೆ ಕೇಂದ್ರ ಜಲ ಸಂಪನ್ಮೂಲ ಸಚಿವರು ಸಮಯ ಕೊಟ್ಟಿದ್ದಾರೆ. ಅವರ ಜೊತೆಗೂ ಚರ್ಚೆ ಮಾಡುತ್ತೇನೆ ಎಂದು ತಿಳಿಸಿದರು. ಇದೇ ವೇಳೆ ಸಮಯ ಸಿಕ್ಕರೆ ಹೈಕಮಾಂಡ್ ನಾಯಕರನ್ನು ಭೇಟಿಯಾಗ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಕಾಂಗ್ರೆಸ್ ಹೈಕಮಾಂಡ್ ಅನ್ನೋದು ದೇವಸ್ಥಾನ ಇದ್ದ ಹಾಗೆ. ಅವಕಾಶ ಸಿಕ್ಕರೆ ಭೇಟಿ ಆಗಿ ಕೈ ಮುಗಿದು ಬರುತ್ತೇವೆ ಎಂದು ತಿಳಿಸಿದರು.

# ನಾಳೆ ಸಿಎಂ ದೆಹಲಿಗೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಜು.7: ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ದೆಹಲಿಗೆ ಭೇಟಿ ನೀಡುತ್ತಿದ್ದು, ಮೈಸೂರಿನ ದಸರಾದಲ್ಲಿ ವೈಮಾನಿಕ ಪ್ರದರ್ಶನ ಆಯೋಜನೆಗೆ ಸಂಬಂಧಪಟ್ಟಂತೆ ರಕ್ಷಣಾ ಸಚಿವರ ಜೊತೆ ಚರ್ಚೆ ನಡೆಸಲಿದ್ದಾರೆ.

ಕಳೆದ ದಸರಾದಲ್ಲೂ ವೈಮಾನಿಕ ಪ್ರದರ್ಶನ ಆಯೋಜನೆಗೆ ಪ್ರಯತ್ನಗಳು ನಡೆದಿದ್ದವು. ಆದರೆ ಅದು ಸಾಧ್ಯವಾಗಿರಲಿಲ್ಲ. ಕೇವಲ ಹೆಲಿಕಾಪ್ಟರ್ ಮತ್ತು ಪ್ಯಾರಾಗ್ಲೈಡಿಂಗ್ ಪ್ರದರ್ಶನಕ್ಕೆ ಮಾತ್ರ ಸೀಮಿತವಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ದಸರಾ ಸಂದರ್ಭದಲ್ಲಿ ಏರ್‌ಶೋ ಆಯೋಜಿಸುವ ಮಹತ್ವಾಕಾಂಕ್ಷೆಯೊಂದಿಗೆ ಈ ಬಾರಿ ಕೂಡ ಪ್ರಯತ್ನ ಮುಂದುವರೆಸಿದ್ದಾರೆ.

ನಾಳೆ ಬೆಳಿಗ್ಗೆ ದೆಹಲಿಗೆ ತೆರಳಿ ಸಂಜೆ 4.30ಕ್ಕೆ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ.

ಹೈಕಮಾಂಡ್ ಜೊತೆ ಚರ್ಚೆ : ಇದೇ ತಿಂಗಳ 15 ರಂದು ಬೆಂಗಳೂರಿನಲ್ಲಿ ಹಿಂದುಳಿದ ವರ್ಗಗಳ ಪ್ರಮುಖ ನಾಯಕರ ಸಮಾವೇಶ ಆಯೋಜನೆಗೊಳ್ಳಲಿದ್ದು, ಅದರ ಪೂರ್ವಭಾವಿಯಾಗಿ ಸಿದ್ದರಾಮಯ್ಯ ಹೈಕಮಾಂಡ್ ನಾಯಕರ ಜೊತೆ ಚರ್ಚೆ ನಡೆಸುವ ಸಾಧ್ಯತೆಯಿದೆ.

(2ನೇ ಪುಟ ನೋಡಿ)

# ಕಲುಷಿತ ನೀರು ಸೇವನೆ ಶಂಕೆ : ಮೂವರು ಸಾವು, 20 ಮಂದಿ ಅಸ್ವಸ್ಥ

ಮಲ್ಲಮ್ಮನುಡಿವಾರ್ತೆಯಾದಗಿರಿ:ಜು.7: ಜಿಲ್ಲೆಯ ಸುರಪುರ ತಾಲೂಕಿನ ತಿಪ್ಪನಟಗಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಮೂರು ಜನರು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ.

ತಿಪ್ಪನಟಗಿ ಗ್ರಾಮದ ದೇವಿಕೆಮ್ಮ ಹೊಟ್ಟಿ (48), ವೆಂಕಮ್ಮ (60), ರಾಮಣ್ಣ ಪೂಜಾರಿ (50) ಮೃತ ದುರ್ದೈವಿಗಳು.

ಕಳೆದ ಹತ್ತು ದಿನಗಳಿಂದ ತಿಪ್ಪನಟಗಿ ಗ್ರಾಮದ ಹಲವರು ವಾಂತಿ, ಭೇದಿಯಿಂದ ಬಳಲಿ, ಅಸ್ವಸ್ಥರಾಗುತ್ತಿದ್ದರು. ಈ ಹಿನ್ನೆಲೆ ಜನರು ಚಿಕಿತ್ಸೆಗಾಗಿ ಬೇರೆ ಬೇರೆ ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಾಗಿದ್ದರು. ಆದರೆ ದಾಖಲಾದ ಮೂರೇ ದಿನಗಳಲ್ಲಿ ಮೂರು ಜನರು ಸಾವನ್ನಪ್ಪಿದ್ದು, ಆರು ಜನರ ಸ್ಥಿತಿ ಗಂಭೀರವಾಗಿದೆ. ಇನ್ನೂ ಕೆಲವರು ಚೇತರಿಸಿಕೊಂಡಿದ್ದು, 20 ಜನರು ಅಸ್ವಸ್ಥರಾಗಿದ್ದಾರೆ.

ಈ ಹಿನ್ನೆಲೆ ಸ್ಥಳಕ್ಕೆ ಸುರಪುರ ಟಿಹೆಚ್‌ಓ ರಾಜಾ ವೆಂಕಟಪ್ಪ ನಾಯಕ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ವರದಿ ನೀಡುವಂತೆ ವೈದ್ಯರಿಗೆ ತಿಳಿಸಿದ್ದಾರೆ.

ಈ ಸಂಬಂಧ ಯಾದಗಿರಿ ಡಿಹೆಚ್‌ಓ ಡಾ. ಮಹೇಶ್ ಬಿರಾದಾರ ಪ್ರತಿಕ್ರಿಯೆ ನೀಡಿದ್ದು, ತಿಪ್ಪನಟಗಿ ಗ್ರಾಮದಲ್ಲಿನ ವಾಂತಿ-ಭೇದಿ ಪ್ರಕರಣಗಳು ನಮ್ಮ ಗಮನಕ್ಕೆ ಬಂದಿದೆ. ನಮ್ಮ ಆರೋಗ್ಯ ಇಲಾಖೆಯ ಟಿಹೆಚ್‌ಓ ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ಕಾರ್ಯಪ್ರವೃತ್ತರಾಗಿದ್ದಾರೆ. ಸಾವಿಗೀಡಾದವರು ಹಲವು ಕಾಯಿಲೆಯಿಂದ ಬಳಲುತ್ತಿದ್ದರು. ಜೊತೆಗೆ ಹೃದಯ ಸಂಬಂಧಿ ಕಾಯಿಲೆ, ಸಕ್ಕರೆ ಕಾಯಿಲೆ, ಮೆದುಳಿನ ರೋಗದಿಂದ ಬಳಲುತ್ತಿರುವುದು ಬೆಳಕಿಗೆ ಬಂದಿದೆ. ಹೀಗಾಗಿ ವಾಂತಿ-ಭೇದಿ ಸಾವಿಗೆ ನಿಖರ ಕಾರಣವಲ್ಲ. ಸದ್ಯ ಇದೇ ಸಮಸ್ಯೆಯಿಂದ ಬಳಲುತ್ತಿದ್ದವರಿಗೆ ಚಿಕಿತ್ಸೆ ನೀಡಲಾಗಿದ್ದು, ಗುಣಮುಖರಾಗಿದ್ದಾರೆ. ಗ್ರಾಮಸ್ಥರು ಆತಂಕಪಡುವ ಪರಿಸ್ಥಿತಿ ಇಲ್ಲ ಎಂದರು. ಸಾವಿಗೆ ನಿಖರವಾದ ಕಾರಣದ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತಿದೆ. ಕಳೆದ ಹತ್ತು ದಿನಗಳ ಹಿಂದೆ ಕುಡಿಯುವ ನೀರನ್ನು ತಪಾಸಣೆ ಮಾಡಲಾಗಿತ್ತು. ವರದಿಯಲ್ಲಿ ನೀರು ಕುಡಿಯಲು ಯೋಗ್ಯವಿದೆ ಎಂದು ಬಂದಿದೆ. ಈ ಕುರಿತು ತನಿಖೆ ನಡೆಯುತ್ತಿದ್ದು, ಸಂಪೂರ್ಣ ತನಿಖೆ ಬಳಿಕ ಎಲ್ಲಾ ಸತ್ಯ ಹೊರಬರಲಿದೆ ಎಂದ ತಿಳಿಸಿದರು.

# ನಾಪತ್ತೆಯಾದ ವ್ಯಕ್ತಿ ಕೊಲೆ: ತನಿಖೆಯಿಂದ ಬಯಲು:ಮೂವರ ಬಂಧನ



ರಾಘವೇಂದ್ರ ನಾಯಕ್





ಮಲ್ಲಮ್ಮನುಡಿವಾರ್ತೆಕಲಬುರಗಿ,ಜು.7: ಮಹಿಳೆಯೊಂದಿಗೆ ಇದ್ದ ಲಿವಿಂಗ್ ಟುಗೆದರ್ ಸಂಬಂಧದಲ್ಲಿ ಉಂಟಾದ ಮನಸ್ತಾಪದಲ್ಲಿ ವ್ಯಕ್ತಿಯೊಬ್ಬನನ್ನು ಹತ್ಯೆಮಾಡಿದ ಆರೋಪದ ಮೇರೆಗೆ ನಗರದ ಮೂವರನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್ ಡಿ ಅವರು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಲಬುರಗಿ ಗಣೇಶ ನಗರದ ನಿವಾಸಿ ರಾಘವೇಂದ್ರ ನಾಯಕ್ (39) ಕೊಲೆಯಾದ ವ್ಯಕ್ತಿ. ಗುರುರಾಜ ಅಲಿಯಾಸ್ ಗುರು ಶೇಷಪ್ಪನೆಲೋಗಿ ( 36), ಅಶ್ವಿನಿ ಅಲಿಯಾಸ್ ತನು ರಾಜಶೇಖರ ಮಲ್ಲಾಬಾದ (26) ಮತ್ತು ಲಕ್ಷ್ಮೀಕಾಂತ ಮಲ್ಲಿಕಾರ್ಜುನ ಮಾಲಿ ಪಾಟೀಲ (28) ಬಂಧಿತ ಆರೋಪಿಗಳು

ಘಟನೆಯ ವಿವರ: ನಗರದಲ್ಲಿ ಸಣ್ಣಪುಟ್ಟ ಕೆಲಸ ಮಾಡಿಕೊಂಡಿದ್ದ ರಾಘವೇಂದ್ರನಾಯಕನು ಸುಮಾರು 2 ತಿಂಗಳಿಂದ ಮನೆಯಿಂದ

(2ನೇ ಪುಟ ನೋಡಿ)







# ಜಲ ಜೀವನ ಮಿಷನ್ ಯೋಜನೆ ತ್ವರಿತವಾಗಿ ಪೂರ್ಣಗೊಳಿಸಿ: ರಾಹುಲ್

ಜಲ ಜೀವನ ಮಿಷನ್ ಯೋಜನೆ ತ್ವರಿತವಾಗಿ ಪೂರ್ಣಗೊಳಿಸಿ: ರಾಹುಲ್

ರಾಯಚೂರು ಜು 07 : ಪ್ರತಿ ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಸುವ ಜಲ ಜೀವನ ಮಿಷನ್ ಯೋಜನೆ ಅನುಷ್ಠಾನ ಕಾರ್ಯವನ್ನು ಜಿಲ್ಲೆಯಲ್ಲಿ ತ್ವರಿತವಾಗಿ ಪೂರ್ಣಗೊಳಿಸಬೇಕು ಹಾಗೂ ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜುಲೈ 07ರ ಸೋಮವಾರ ದಂದು ನಗರದ ಜಿಲ್ಲಾ ಪಂಚಾಯಿತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜಲ ಜೀವನ ಮಿಷನ್ ಯೋಜನೆ ಕಾಮಗಾರಿಗಳ ಸಮಗ್ರ ಅನುಷ್ಠಾನಕ್ಕಾಗಿ ಜಿಲ್ಲಾ ನೀರು ಮತ್ತು ನೈರ್ಮಲ್ಯ



ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕೈಗೊಂಡಿರುವ ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಯು ಗುಣಮಟ್ಟದಿಂದ ಕೂಡಿರಬೇಕು. ಸಂಬಂಧಪಟ್ಟ ಅಧಿಕಾರಿಗಳು ಖುದ್ದಾಗಿ ಕಾಲಕಾಲಕ್ಕೆ ಸ್ಥಳ ಪರಿಶೀಲನೆ ಮಾಡಬೇಕು. ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಗೆ ಸುಮಾರು 84141.25 ಲಕ್ಷ ರೂ. ಅನುದಾನ ಮಂಜೂರಾಗಿದ್ದು, ಸರ್ಕಾರದ ಅನುದಾನ ಸದ್ಬಳಕೆ ಮಾಡಿಕೊಳ್ಳಬೇಕು. ಕೆಲಸ ಸರಿಯಾಗಿ ಮಾಡಬೇಕೆಂದು ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಬೇಕೆಂದರು.

ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯ 5 ತಾಲೂಕಿನಲ್ಲಿ ಬ್ಯಾಚ್ 1, 2, 3 ಮತ್ತು 4 ರಲ್ಲಿ ಒಟ್ಟು 1223 ಕಾಮಗಾರಿಗಳನ್ನು ಕೈಗೊಂಡಿದ್ದು, ಇದರಲ್ಲಿ 832 ಕಾಮಗಾರಿಗಳು ಪೂರ್ಣಗೊಂಡಿದ್ದು, 387 ಕಾಮಗಾರಿಗಳು ಪ್ರಗತಿಯಲ್ಲಿದ್ದು, ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಶಾಲೆಗಳು ಮತ್ತು ಅಂಗನವಾಡಿಗಳಿಗೆ ಜಲಜೀವನ್ ಮಿಷನ್ ಯೋಜನೆಯನ್ನು ಅನುಷ್ಠಾನಗೊಳಿಸಬೇಕು. ಯಾವ-ಯಾವ ಶಾಲೆಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಅವನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮಹಜರು ಮಾಡಿ ವರದಿ ನೀಡಬೇಕು. ಅಂಗನವಾಡಿಗಳಲ್ಲಿ ಬಳಸಲಾಗುವ ನೀರನ್ನು ಸರಿಯಾಗಿದೆಯೇ ಇಲ್ಲವೇ ಎಂಬುವುದನ್ನು ಆರೋಗ್ಯ ಇಲಾಖೆಯಿಂದ ಪರೀಕ್ಷೆ ನಡೆಸಬೇಕು. ಮುಖ್ಯವಾಗಿ ಕುಡಿಯುವ ನೀರು ಹಾಗೂ ಆಡುಗೆಗೆ ಬಳಸುವ ನೀರನ್ನು ಸರಿಯಾಗಿ ಪರೀಕ್ಷೆ ಮಾಡಲೇಬೇಕು ಎಂದು ತಿಳಿಸಿದರು.

ಪ್ರತಿದಿನವೂ ಆರೋಗ್ಯ ಇಲಾಖೆಯಿಂದ ನೀರಿನ ಪರೀಕ್ಷಾ ವರದಿಯನ್ನು ಪಡೆಯಲಾಗುತ್ತಿದೆ. ಆಯಾ ಗ್ರಾಮಗಳ ನೀರಿನ ಗುಣಮಟ್ಟದ ಪರೀಕ್ಷೆಯನ್ನು ಆಯಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಪಡೆಯಲಾಗುತ್ತದೆ.

(2ನೇ ಪುಟ ನೋಡಿ)

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಮುಖ್ಯ ಉದ್ದೇಶ :ಸಚಿವ ಎಸ್.ಮಧು ಬಂಗಾರಪ್ಪ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಜು.7: ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಬೇಕೆಂಬುದು ನಮ್ಮ ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವರಾದ ಎಸ್. ಮಧು ಬಂಗಾರಪ್ಪ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲೆಯ ಯಲಬುರ್ಗಾ ಹಾಗೂ ಕುಕನೂರ ತಾಲೂಕಿನ ಧ್ಯಾಂಪುರ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಬಯಲು:ಮೂವರ ಬಂಧನ

ಕಾಣೆಯಾಗಿದ್ದಾನೆ ಎಂದು ಆತನ ಪತ್ನಿ ಸುರೇಖಾ ಸ್ಟೇಷನ್ ಬಜಾರ್ ಠಾಣೆಗೆ ದೂರು ನೀಡಿದ್ದರು.ಪ್ರಕರಣದ ತನಿಖೆಗೆ ಉಪ ಪೊಲೀಸ್ ಆಯುಕ್ತರಾದ ಕನಿಕಾ ಸಿಕ್ರಿವಾಲ್,ಪ್ರವೀಣ್ ಹೆಚ್ ನಾಯಕ್ ಮಾರ್ಗದರ್ಶನದಲ್ಲಿ ಎಸಿಪಿ ಶರಣಬಸಪ್ಪ ಸುಬೇದಾರ ನೇತೃತ್ವದಲ್ಲಿ ಸ್ಟೇಷನ್ ಬಜಾರ ಪೊಲೀಸ್ ಠಾಣೆ ಪಿಐ ಶಕೀಲ ಅಹ್ಮದ ಅಂಗಡಿ, ಪಿಎಸ್ ಐ ಇಂದಿರವ್ವ ,ಎಎಸ್ ಐ ಶಿವಶರಣಪ್ಪ ಕೋರಳ್ಳಿ ಮತ್ತು ಸಿಬ್ಬಂದಿಗಳ ತಂಡ ರಚಿಸಲಾಗಿತ್ತು.

ರಾಘವೇಂದ್ರ ಇತನಿಗೆ ಕಲಬುರಗಿ ನಗರದ ಬ್ರಹ್ಮಪುರ ಬಡಾವಣೆ ವಡ್ಡರಗಲ್ಲಿ ಕೃಷ್ಣಾ ನಗರದ ಗುರುರಾಜ ಅಲಿಯಾಸ್ ಗುರು ಇತನೊಂದಿಗೆ ತಂಟೆ ತಕರಾರು ಇತ್ತು ಎಂದು ಮಾಹಿತಿ ದೊರೆಯಿತು.ಈ ನಿಟ್ಟಿನಲ್ಲಿ ಮತ್ತಷ್ಟು ತನಿಖೆ ಚುರುಕುಗೊಳಿಸಿ ಮಾಹಿತಿ ಕಲೆಹಾಕಿದಾಗ ರಾಘವೇಂದ್ರ ಈತನು ಮೊದಲು ಅಶ್ವಿನಿ ಅಲಿಯಾಸ್ ತನು ಎಂಬ ಮಹಿಳೆಯೊಂದಿಗೆ ಲಿವಿಂಗ್ ಟುಗೆದರ್ ಸಂಬಂಧದಲ್ಲಿ ಇದ್ದ ಎಂದು ಗೊತ್ತಾಯಿತು.ಸ್ವಲ್ಪ ದಿನಗಳ ನಂತರ ಅಶ್ವಿನಿ ರಾಘವೇಂದ್ರನನ್ನು ಬಿಟ್ಟು ಗುರುರಾಜ ಅಲಿಯಾಸ್ ಗುರು ಸಂಬಂಧ ಬೆಳೆಸಿದಳು. ಇದು ಇವರಿಬ್ಬರ ನಡುವೆ ವೈಷಮ್ಯಕ್ಕೆ ಕಾರಣವಾಯಿತು ಎಂದು ತಿಳಿದು ಬಂದಿದೆ.

ಕಳೆದ ಮಾರ್ಚ 12 ರಂದು ರಾತ್ರಿ 8.30ರ ಸುಮಾರಿಗೆ ರಾಘವೇಂದ್ರನು ಕಲಬುರಗಿ ನಗರದ ಸುಪರ ಮಾರ್ಕೆಟ್ ಹತ್ತಿರ ಇರುವ ಒಂದು ಲಾಡ್ಜ ಹತ್ತಿರ ಇದ್ದ ಮಾಹಿತಿ ಪಡೆದ ಮೂವರು ಆರೋಪಿಗಳು ಅಲ್ಲಿಂದ ಕಾರಿನಲ್ಲಿ ಆತನನ್ನು ಕೂಡಿಸಿಕೊಂಡು ಕೃಷ್ಣಾ ನಗರದ ಸ್ಮಶಾನ ಭೂಮಿ ಹತ್ತಿರ ಬಂದು ಅಲ್ಲಿ ಕೈಯಿಂದ ಮತ್ತು ಬಡಿಗೆಗಳಿಂದ ಹೊಡೆದು ಕೊಲೆಮಾಡಿ ನಂತರ ಶವವನ್ನು ಕಾರಿನಲ್ಲಿ ಹಾಕಿಕೊಂಡು ಶಹಾಬಾದ ಮುಖಾಂತರ ರಾಯಚೂರ ಜಿಲ್ಲೆಯ ಶಕ್ತಿ ನಗರದ ಕೃಷ್ಣಾ ಬ್ರಿಡ್ಜ್ ಮೇಲಿಂದ ನದಿಯಲ್ಲಿ ಶವವನ್ನು ಎಸೆದು ಬಂದಿದ್ದಾರೆ.ಪ್ರಕರಣದಲ್ಲಿ ಮತ್ತಷ್ಟು ಆರೋಪಿಗಳು ಭಾಗಿಯಾಗಿರುವ ಬಗ್ಗೆ ತನಿಖೆ ಕೈಗೊಳ್ಳಲಾಗುತ್ತಿದೆ ಎಂದು ಡಾ.ಶರಣಪ್ಪ ಅವರು ವಿವರಿಸಿದರು.

ಪ್ರಕರಣದ ಆರೋಪಿತರನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರನ್ನು ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್.ಡಿ., ಐ.ಪಿ.ಎಸ್ ಕಲಬುರಗಿ ನಗರ ರವರು ಶ್ಲಾಘಿಸಿರುತ್ತಾರೆ.

# ಮುಖ್ಯ ಉದ್ದೇಶ :ಸಚಿವ ಎಸ್.ಮಧು ಬಂಗಾರಪ್ಪ

ನೂತನ ಸರ್ಕಾರಿ ಪ್ರೌಢಶಾಲೆ ಹಾಗೂ ಹಿರಿವಂಕಲಕುಂಟ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಶಿಕ್ಷಣ ಇಲಾಖೆಯಲ್ಲಿ ಸಾಕಷ್ಟು ಕೆಲಸಗಳು ಆಗುತ್ತಿವೆ. ರಾಜ್ಯ ಸರ್ಕಾರ ಮತ್ತು ಅಜೀಮ್ ಪ್ರೇಮಜಿ ಫೌಂಡೇಶನ್ ಸಹಯೋಗದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ವಾರದಲ್ಲಿ ಆರು ದಿನ ಮೊಟ್ಟೆ ಮತ್ತು ಬಾಳೆ ಹಣ್ಣುಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರ ಜೊತೆಗೆ ಮಕ್ಕಳಿಗೆ ಬಿಸಿಊಟ, ಹಾಲು, ಪಠ್ಯ ಪುಸ್ತಕ, ಸಮವಸ್ತ್ರದೊಂದಿಗೆ ಶೂಗಳು ಮತ್ತು ಸಾಕ್ಸ್ ಹಾಗೂ ವಿಶೇಷವಾಗಿ ಮಕ್ಕಳ ಪೌಷ್ಠಿಕ ಬೆಳವಣಿಗೆಗೆ ರಾಗಿ ಮಾಲ್ಟ್ ಕೊಡಲಾಗುತ್ತಿದೆ. ಒಂದು ಸಮೀಕ್ಷಾ ವರದಿ ಪ್ರಕಾರ ರಾಜ್ಯದಲ್ಲಿ ಕಳೆದ ಎರಡು ಮೂರು ವರ್ಷಗಳಲ್ಲಿ ಮಕ್ಕಳ ಪೌಷ್ಠಿಕತೆ ಉನ್ನತ ಸ್ಥಾನವನ್ನು ಪಡೆದಿದೆ. ಉತ್ತಮ ಶಿಕ್ಷಕರು ಸರ್ಕಾರಿ ಶಾಲೆಗಳಲ್ಲಿದ್ದು, ಇಲ್ಲಿ ಓದುವ ಮಕ್ಕಳೆಲ್ಲ ಪುಣ್ಯವಂತರು. ಸರ್ಕಾರಿ ಶಾಲೆಗಳಲ್ಲಿ ಓದಿದವರೆಲ್ಲ ಉನ್ನತ ಸ್ಥಾನಗಳಲ್ಲಿದ್ದಾರೆ. ಇಂದಿನ ನಮ್ಮ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಸಹ ಓದಿರುವುದು ಒಂದು ಸರ್ಕಾರಿ ಶಾಲೆಯಲ್ಲಿಯೆ. ಸರ್ಕಾರಿ ಶಾಲೆಗಳ ಮಕ್ಕಳು ಚೆನ್ನಾಗಿ ಓದಿ ಬುದ್ದಿವಂತರಾಗಬೇಕು.

ಮಕ್ಕಳ ಸೇವೆ ಮಾಡಲು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳು ನನಗೆ ಶಿಕ್ಷಣ ಇಲಾಖೆಯನ್ನು ನೀಡಿದ್ದಾರೆ. ರಾಜ್ಯದಲ್ಲಿ ಕೆ.ಪಿ.ಎಸ್. ಶಾಲೆಗಳನ್ನು ಪ್ರಾರಂಭಿಸಲಿದ್ದೇವೆ ಹಾಗೂ ಅವಶ್ಯವಿರುವಲ್ಲಿ ಹೈಸ್ಕೂಲ್ ಮತ್ತು ಪಿಯುಸಿ ಕಾಲೇಜುಗಳನ್ನು ಮಾಡಿಕೊಡಲಾಗುವುದು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುಧಾನದಲ್ಲಿ ಶೇ. 25ರಷ್ಟನ್ನು ಶಿಕ್ಷಣಕ್ಕಾಗಿಯೇ ಮೀಸಲಿಡಲಾಗಿದೆ. ಪರೀಕ್ಷೆಯಲ್ಲಿ ಕಾಪಿ ಮಾಡುವುದನ್ನು ತಡೆಯಲು ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಇದರಿಂದ ಕೆಲ ಮಕ್ಕಳು ಫೇಲ್ ಆಗುತ್ತಿರಬಹುದು. ಆದರೆ, ಭವಿಷ್ಯದಲ್ಲಿ ಮಕ್ಕಳು ಯಾವುದೇ ರೀತಿಯಲ್ಲಿ ಸೋಲುವುದಿಲ್ಲ. ಮೂರು ಪರೀಕ್ಷಾ ಸೂತ್ರವನ್ನು ಜಾರಿಗೆ ತರಲಾಗಿದ್ದು, ಈ ವ್ಯವಸ್ಥೆಯ ಮಹತ್ವವು ಮುಂಬರುವ ದಿನಗಳಲ್ಲಿ ತಿಳಿಯಲಿದೆ. ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಮಕ್ಕಳಲ್ಲಿ 84,400 ಕ್ಕಿಂತಲು ಹೆಚ್ಚು ಮಕ್ಕಳು ಎಸ್.ಎಸ್.ಎಲ್.ಸಿ ಪರೀಕ್ಷೆ-2ರಲ್ಲಿ ಉತ್ತೀರ್ಣರಾಗಿ ಶಿಕ್ಷಣ ಇಲಾಖೆಯ ಗೌರವನ್ನು ಹೆಚ್ಚಿಸಿದ್ದಾರೆ. ಇದರಲ್ಲಿ ಸರ್ಕಾರಿ ಶಾಲೆಗಳು ಮೊದಲ ಸ್ಥಾನದಲ್ಲಿದ್ದು, ಅನುದಾನಿತ ಮತ್ತು ಖಾಸಗಿ ಶಾಲೆಗಳು 2ನೇ ಮತ್ತು 3ನೇ ಸ್ಥಾನದಲ್ಲಿವೆ. ಸದ್ಯ 3ನೇ ಪರೀಕ್ಷೆಯು ನಡೆಯುತ್ತಿದೆ ಎಂದು ಹೇಳಿದರು. ಇಡೀ ರಾಜ್ಯದಾದ್ಯಂತ ರೈತರ ಹೊಲಗಳು ಹಸಿರಾಗಿವೆ ಎಂಬುವುದಕ್ಕೆ ಕಾರಣ ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪನವರು 36 ರಿಂದ 37 ಲಕ್ಷ ಬೋರ್ವೆಲ್‌ಗಳಿಗೆ ಉಚಿತ ವಿದ್ಯುತ್ ನೀಡಿ, ಆರ್ಥಿಕವಾಗಿ ದುಡಿಯುವ ರೈತರ ಕೈಗಳಿಗೆ ಶಕ್ತಿ ನೀಡಿದ್ದರು. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಗೃಹಜ್ಯೋತಿ ಯೋಜನೆಯನ್ನು ಜಾರಿಗೆ ಮಾಡುವುದರ ಮೂಲಕ ಪ್ರತಿಯೊಂದು ಮನೆಗೆ ಉಚಿತ ಬೆಳಕನ್ನು ನೀಡಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಎರಡು ವರ್ಷಗಳನ್ನು ಪೂರೈಸಿದ್ದು, ಹಲವಾರು ಜನಪರವಾದ ಕಾರ್ಯಕ್ರಮಗಳನ್ನು ಜಾರಿಗೆ ಮಾಡಲಾಗಿದೆ. ವಿಶೇಷವಾಗಿ ನಮ್ಮ ಯಲಬುರ್ಗಾ ಕ್ಷೇತ್ರದಲ್ಲಿ 16 ಹೊಸ ಶಾಲೆಗಳು ಮತ್ತು 7 ಹೊಸ ಜೂನಿಯರ್ ಕಾಲೇಜುಗಳು ಪ್ರಾರಂಭವಾಗಿದ್ದು, ಇನ್ನೊಂದು ವಾರದಲ್ಲಿ ತಲಾ ಒಂದು ಹೊಸ ಹೈಸ್ಕೂಲ್ ಮತ್ತು ಜೂನಿಯರ್ ಕಾಲೇಜು ಪ್ರಾರಂಭವಾಗಲಿದೆ. ಇದರ ಜೊತೆಗೆ ವಿವಿಧ ಗ್ರಾಮಗಳಲ್ಲಿ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಅನುದಾನ ನೀಡಲಾಗಿದೆ. ಪ್ರಾರ್ಥಮಿಕ ಆರೋಗ್ಯ ಕೇಂದ್ರಗಳನ್ನು ಸಹ ಮಂಜೂರು ಮಾಡಿಸಲಾಗಿದೆ. ಬ್ರಿಜ್ ಕಂ ಬ್ಯಾರೆಜ್ ನಿರ್ಮಾಣ, ಕೆರೆ ತುಂಬಿಸಲು ಸಹ ಅನುದಾನವನ್ನು ನೀಡಲಾಗಿದೆ. ಒಂದು ಶಾಲೆ ಪ್ರಾರಂಭಿಸಿದ ಬಳಿಕ ಶಾಲಾ ಮುಖ್ಯಗುರುಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳಿಗೆ ವೇತನ ಸೇರಿದಂತೆ ಒಂದು ವರ್ಷಕ್ಕೆ ಸುಮಾರು 70 ರಿಂದ 75 ಲಕ್ಷಗಳು ಖರ್ಚಾಗಲಿದ್ದು, ಈ ಅನುದಾನವನ್ನು ಸರ್ಕಾರವು ನೀಡಲಿದೆ ಎಂದರು.

ಮಧು ಬಂಗಾರಪ್ಪ ಶಿಕ್ಷಣ ಮಂತ್ರಿಗಳಾದ ನಂತರ ಉತ್ತಮ ಕೆಲಸಗಳನ್ನು ಮಾಡುತ್ತಿದ್ದಾರೆ. ಗ್ರಾಮೀಣ ಭಾಗಗಳಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಗಳು ಬೇಕೆಂದು ಬಹಳಷ್ಟು ಜನರು ಒತ್ತಾಯ ಮಾಡುತ್ತಿದ್ದಾರೆ. ಎಲ್.ಕೆ.ಜಿ ಯಿಂದ ಪಿ.ಯುಸಿ ವರೆಗೆ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳನ್ನು ಮಾಡಲು ಸಚಿವರು ಬಹಳಷ್ಟು ಆಸಕ್ತಿ ವಹಿಸಿದ್ದಾರೆ. ಸರ್ಕಾರದಿಂದ 500 ಕೆ.ಪಿ.ಎಸ್ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಇದರ ಜೊತೆಗೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಯೋಜನೆಯಡಿ 50 ಶಾಲೆಗಳನ್ನು ಮಂಜೂರು ಮಾಡಿದ್ದು, ಇದೊಂದು ಐತಿಹಾಸಿಕ ದಾಖಲೆಯಾಗಲಿದೆ. ಪ್ರತಿ ಶಾಸಕರ ಕ್ಷೇತ್ರಕ್ಕೆ 3 ಶಾಲೆಗಳನ್ನು ನೀಡುವುದಾಗಿ ಸಚಿವರು ತಿಳಿಸಿದ್ದು, ನಮ್ಮ ಯಲಬುರ್ಗಾ ಕ್ಷೇತ್ರಕ್ಕೆ 4 ಕೆ.ಪಿ.ಎಸ್ ಶಾಲೆಗಳನ್ನು ನೀಡುವಂತೆ ನಾನು ಕೇಳಿದ್ದೇನೆ. ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಗುನ್ನಾಳ ಮತ್ತು ಬಿನ್ನಾಳ ಗ್ರಾಮಗಳಲ್ಲಿ ಒಂದೊಂದು ಸೇರಿ ನಮ್ಮ ಕ್ಷೇತ್ರದಲ್ಲಿ ಒಟ್ಟು 6 ಕೆ.ಪಿ.ಎಸ್ ಶಾಲೆಗಳು ಮಂಜೂರಾಗಲಿವೆ. ನಮ್ಮ ಸರ್ಕಾರದಲ್ಲಿ ಯಾವುದೇ ರೀತಿಯ ಅನುದಾನದ ಕೊರತೆಯಿಲ್ಲ. ಶಿಕ್ಷಣ-ಕ್ಕಾಗಿಯೇ ನಮ್ಮ ಸರ್ಕಾರವು ಬಜೆಟ್‌ನಲ್ಲಿ ರೂ. 42 ಸಾವಿರ ಕೋಟಿ ಅನುದಾನವನ್ನು ಮೀಸಲಿರಿಸಿದೆ ಎಂದು ಹೇಳಿದರು. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ ಬಿರಾದಾರ ಅವರು ಮಾತನಾಡಿ, ಯಲಬುರ್ಗಾ ವಿಧಾನ ಸಭಾ ಕ್ಷೇತ್ರದಲ್ಲಿ ಪ್ರತಿ ಮೂರು ಕಿಮೀ ಒಂದು ಪ್ರೌಢಶಾಲೆ ಸಿಗುತ್ತದೆ. ಪ್ರತಿಯೊಂದು ಮಗುವಿಗೆ ಶಾಲಾ ಅವಕಾಶ ಸಿಗಬೇಕೆಂಬ ಮಹದಾಶೆಯಿಂದ ಹಿರೇವಂಕಲಕುಂಟಾ ಗ್ರಾಮದ ಶಾಲೆಯಲ್ಲಿ 600 ಮಕ್ಕಳಿದ್ದು, ಈ ಎಲ್ಲಾ ಮಕ್ಕಳಿಗೆ ಒಂದೇ ಶಾಲೆಯಲ್ಲಿ ಕಲಿಯಲು ಕಷ್ಟವಾಗುತ್ತಿದೆ ಎಂದು ಬಸವರಾಜ ರಾಯರಡ್ಡಿ ಅವರಲ್ಲಿ ಮನವಿ ಮಾಡಿಕೊಂಡಾಗ, ಇದಕ್ಕೆ ತಕ್ಷಣ ಸ್ಪಂದಿಸಿ, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯನ್ನು ಮಂಜೂರು ಮಾಡಿದ್ದು, ಇಂದು ಸಚಿವರಿಂದ ಉದ್ಘಾಟನೆಗೊಂಡಿದೆ. ಈ ಶಾಲೆಯಲ್ಲಿ ಸದ್ಯ 80 ಮಕ್ಕಳು ದಾಖಲಾಗಿದ್ದು, ಮುಂದಿನ ದಿನಮಾನಗಳಲ್ಲಿ 300 ಮಕ್ಕಳು ದಾಖಲಾಗಲು ಅವಕಾಶವಿದೆ. ಎರಡು ವರ್ಷದ ಅವಧಿಯಲ್ಲಿ ನಮ್ಮ ಜಿಲ್ಲೆಗೆ 18 ಪ್ರೌಢಶಾಲೆಗಳು, 5 ಪಿಯು ಕಾಲೇಜುಗಳು ಮತ್ತು ಮೊರಾರ್ಜಿ ಶಾಲೆಗಳು, ಪದವಿ ಕಾಲೇಜುಗಳು ಬಂದಿವೆ. ಇದಲ್ಲದೆ ಪ್ರಸ್ತುತ ವಿಶ್ವದಲ್ಲಿ ಬೇಡಿಕೆಯಲ್ಲಿರುವ ಕೌಶಲ್ಯ ಅಭಿವೃದ್ಧಿಯ ತರಬೇತಿಯನ್ನು ಈ ಭಾಗದ ಮಕ್ಕಳು ಕಲಿಯಬೇಕೆಂಬ ಉದ್ದೇಶದಿಂದ ಕೌಶಲ್ಯ ತರಬೇತಿ ಕೇಂದ್ರಕ್ಕೆ ರೂ. 120 ಕೋಟಿಗಳ ಅನುದಾನವನ್ನು ಒದಗಿಸಿದ್ದಾರೆ. ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಯಲಬುರ್ಗಾ ತಾಲ್ಲೂಕು ಮೊದಲ ಸ್ಥಾನದಲ್ಲಿದ್ದು, ಶಿಕ್ಷಣಕ್ಕಾಗಿ ಬೇಕಾಗಿರುವ ಎಲ್ಲಾ ಸೌಲಭ್ಯಗಳನ್ನು ರಾಯರಡ್ಡಿ ಯವರು ಒದಗಿಸಿಕೊಟ್ಟಿದ್ದಾರೆ ಎಂದರು. ಈ ಕಾರ್ಯಕ್ರಮದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ ಗೌಡ ಪಾಟೀಲ, ಜಿ.ಪಂ ಸದಸ್ಯರಾದ ಹನುಮಂತಗೌಡ ಚಂಡೂರು, ಮಹೇಶ ಹಳ್ಳಿ, ಅಶೋಕ ತೋಟದ, ಚಂದ್ರಶೇಖರಯ್ಯ ಹಿರೇಮಠ, ಶಾಲೆಯ ಮುಖ್ಯೋಪಾಧ್ಯಾಯರಾದ ಮುತ್ತಣ್ಣ ಎ ಎಚ್, ಪೀರ್ ಸಾಬ್ ದಫೇಧಾರ್, ಮಾರುತಿ ತಳವಾರ್, ಹಾಗೂ ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು, ಶಾಲೆಯ ಶಿಕ್ಷಕರು, ಜನಪ್ರತಿನಿಧಿಗಳು, ಶಾಲೆಯ ಮಕ್ಕಳು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ತ್ವರಿತವಾಗಿ ಪೂರ್ಣಗೊಳಿಸಿ: ರಾಹುಲ್

ಜೊತೆಗೆ ಡೆಂಗ್ಯೂ ಮಾಹಿತಿಯನ್ನೂ ಪಡೆಯಲಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ನಾಗೇಶ್, ಸಾರ್ವಜನಿಕ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ಗಣೇಶ್, ಜಿಲ್ಲಾ ಗಿರಿಜನ ಕಲ್ಯಾಣಾಧಿಕಾರಿ ಮಲ್ಲಯ್ಯ ಕೆ., ರಾಯಚೂರು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಪುಷ್ಪಲತಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಇದ್ದರು.

# ಸಿಎಂ ದೆಹಲಿಗೆ

ದೆಹಲಿಗೆ ಭೇಟಿ ನೀಡುವ ಅವರು, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿಯವರನ್ನು ಭೇಟಿಯಾಗುವ ಸಾಧ್ಯತೆಯಿದೆ.ರಾಜ್ಯದಲ್ಲಿ 4 ವಿಧಾನಪರಿಷತ್ ಸ್ಥಾನಗಳ ನೇಮಕಾತಿಯ ಪ್ರಸ್ತಾವನೆ ನನೆಗುದಿಗೆ ಬಿದ್ದಿದೆ. ಈ ಸಂಬಂಧ ಮಾತುಕತೆ ನಡೆಸಿ ಹೈಕಮಾಂಡ್ ನಾಯಕರ ಮನವೊಲಿಸಿ ಅನುಮತಿ ಪಡೆದುಕೊಳ್ಳುವ ನಿರೀಕ್ಷೆ ಇದೆ.

ಜೊತೆಗೆ ಹಿಂದುಳಿದ ವರ್ಗಗಳ ಘಟಕದ ಸಮಾವೇಶದಲ್ಲಿ ಚರ್ಚೆ ನಡೆಸಬೇಕಾಗಿರುವ ವಿಷಯಗಳು ಮತ್ತು ಅದರ ದಿಕ್ಕುದೆಸೆಗಳ ಬಗ್ಗೆ ಹೈಕಮಾಂಡ್ ನಾಯಕರೊಂದಿಗೆ ಸಮಾಲೋಚನೆ ನಡೆಸಿ ರಾಷ್ಟ್ರ ರಾಜಕಾರಣದಲ್ಲಿ ಮಹತ್ವದ ಸಂಚಲನ ಮೂಡಿಸುವಂತಹ ವಿಷಯಗಳ ನಿಗದಿಗೆ ಸಿದ್ದರಾಮಯ್ಯ ಮುಂದಾಗಿದ್ದಾರೆ.

ದೆಹಲಿ ಪ್ರವಾಸದ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಹಣಕಾಸು ಸಚಿವರ ಭೇಟಿಗೂ ಸಿದ್ದರಾಮಯ್ಯನವರು ಪ್ರಯತ್ನ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಮುಂದಿನ ಮೇ.2026ಕ್ಕೆ ಅನುಭವ ಮಂಟಪ ಲೋಕಾರ್ಪಣೆ : ಸಚಿವ ಈಶ್ವರ ಬಿ.ಖಂಡ್ರೆ

ಮಲ್ಲಮ್ಮನುಡಿವಾರ್ತೆಬೀದರ. ಜು.07 : ಬಸವಕಲ್ಯಾಣದಲ್ಲಿ ನಿರ್ಮಾಣಗೊಳ್ಳುತ್ತಿರುವನೂತನ ಅನುಭವಮಂಟಪಕ್ಕೆಪರಿಷ್ಕೃತ ಮೊತ್ತ 742 ಕೋಟಿಗಳಿಗೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಿದ ಹಿನ್ನೆಲೆಯಲ್ಲಿ ಕಾಮಗಾರಿಯ ಗುಣಮಟ್ಟವನ್ನು ಜಾಗರೂಕತೆ ವಹಿಸಿ ಮುಂಬರುವ ಮೇ.2026 ರೊಳಗಾಗಿ ಲೋಕಾರ್ಪಣೆಗೊಳಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಅರಣ್ಯ,ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಸೂಚಿಸಿದರು.



ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಯ ನೂತನ ಅನುಭವ ಮಂಟಪ ನಿರ್ಮಾಣದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

12ನೇ ಶತಮಾನದ ಶರಣರ ಅನುಭವ ಮಂಟಪ, ಸಂಸತ್ ಇಡೀ ದೇಶಕ್ಕೆ ಮಾತ್ರವಲ್ಲದೇ ವಿಶ್ವಕ್ಕೆ ಮಾದರಿಯಾಗಿದೆ. ಈ ಹಿನ್ನೆಲೆಯಲ್ಲಿ ನೂತನ ಅನುಭವ ಮಂಟಪ ಯೋಜನೆಯು ಜಾಗತಿಕ ಮಟ್ಟದ ಸ್ಮಾರಕವಾಗಲಿದ್ದು, ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ರೀತಿಯ ತೊಡಕು ಬಾರದಂತೆ ಅಧಿಕಾರಿಗಳು ಹಾಗೂ ಸಂಪನ್ಮೂಲ ವ್ಯಕ್ತಿಗಳು ಮುಂಜಾಗ್ರತೆ ವಹಿಸಬೇಕು. ಈತನಕ ನೆಲಮಹಡಿ ಸೇರಿ 5 ಅಂತಸ್ತಿನ ಕಟ್ಟಡಗಳು ಪೂರ್ಣಗೊಂಡಿದ್ದು ಒಟ್ಟು 271 ಕೋಟಿ ರೂ. ಖರ್ಚಾಗಿದ್ದು, ಭೌತಿಕವಾಗಿ ಶೇ.63 ರಷ್ಟು ಪ್ರಗತಿಯಾಗಿದೆ. ಅನುಭವ ಮಂಟಪದ ಪ್ರಗತಿ ಕುರಿತಂತೆ ಮುಂದಿನ ವಾರದಲ್ಲಿ ಮುಖ್ಯಮಂತ್ರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಲಾಗುವುದು ಎಂದು ಸಚಿವರು ತಿಳಿಸಿದರು.

770 ಶರಣರ ವಚನಗಳನ್ನು 770 ಕಂಬಗಳಲ್ಲಿ ಕೆತ್ತುವಾಗ ವಚನಗಳನ್ನು ಹಾಗೂ ಚರಿತ್ರೆಗಳಲ್ಲಿ ಅಕ್ಷರಗಳ ಕೆತ್ತನೆಯಲ್ಲಿ ತಪ್ಪುಗಳು ಆಗದಂತೆ ಮುಂಜಾಗ್ರತೆ ವಹಿಸತಕ್ಕದ್ದು,ಪ್ರತಿಯೊಬ್ಬ ಶರಣರ ವಚನಗಳನ್ನು ವಿದ್ವಾಂಸರಿಂದ ಪರಿಶೀಲಿಸತಕ್ಕದ್ದು. ವಚನಗಳ ಸ್ಪಷ್ಟತೆ, ಶರಣರ ಹೆಸರು, ಕಾಯಕದ ವಿವರಗಳನ್ನು ಸಹ ನುರಿತ ತಜ್ಞರ ಸಮಿತಿಯಿಂದ ಅನುಮೋದಿಸತಕ್ಕದ್ದು,ಮಕ್ಕಳಿಗೆ ಯುವಕರಿಗೆ,ಜನಸಾಮಾನ್ಯರಿಗೆ ಅರ್ಥವಾಗುವ ಮಹತ್ವದ ವಚನಗಳಿಗೆ ಆದ್ಯತೆ ನೀಡುವಂತೆ ಸಚಿವರು ಸೂಚಿಸಿದರು.

157 ಶರಣರ ಕಿರು ಚಿತ್ರಗಳನ್ನು ಉನ್ನತ ಮಟ್ಟದ ತಜ್ಞರಿಂದ ನಿರ್ಮಿಸಲಾಗುತ್ತಿದೆ. ಶರಣ ಪರಂಪರೆಯ ಆಧಾರದ ಮೇಲೆ ವಿವಿಧ ಆಚರಣೆ ಹಾಗೂ ಕಾರ್ಯಕ್ರಮಗಳನ್ನು ಆಯೋಜಿಸಲು ಅವಕಾಶ ಕಲ್ಪಿಸಲಾಗುವುದು. ಶರಣರ ರೂಪದ ರೊಬೊಟಿಕ್ಸಗಳ ನಿರ್ಮಾಣ, ಶರಣ ಗ್ರಾಮ 7ಡಿ ಥಿಯೇಟರ್, ವಿಜ್ಞಾನ ಮ್ಯೂಸಿಯಂ ವೈಜ್ಞಾನಿಕ ಇಷ್ಟಲಿಂಗ ಶಿವಯೋಗದ ಗ್ಯಾಲರಿ ಸೇರಿದಂತೆ ವಿವಿಧ ಕಾಮಗಾರಿಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.ಪ್ರವಾಸಿಗರಿಗೆ ಅನುಕೂಲ ಆಗುವ ದೃಷ್ಠಿಯಿಂದ ತ್ರಿಸ್ಟಾರ್ ಹೋಟೇಲ್ ಕಟ್ಟಡದೊಳಗೆ ವಾಟರ ಬೋಟಿಂಗ್,ಲ್ಯಾಂಡ್ ಸ್ಕೇಪಿಂಗ್ ಕುರಿತು ಸಹ ಚರ್ಚಿಸಲಾಯಿತು.

ಬಸವಕಲ್ಯಾಣದ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಹಿನ್ನೆಲೆಯಲ್ಲಿ ರಸ್ತೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು. ತಾವು ಇತ್ತೀಚೆಗೆ ಬಸವಕಲ್ಯಾಣಕ್ಕೆ ಭೇಟಿ ನೀಡಿದಾಗ ರಸ್ತೆಗಳಲ್ಲಿ ದೊಡ್ಡ ಗುಂಡಿಗಳು ಕಂಡುಬಂದಿದ್ದು, ರಸ್ತೆಗೆ ಕೆಕೆಆ???ಡಿಬಿ ಅನುದಾನ ಒದಗಿಸಲಾಗುವುದು ಎಂದರು. ಸ್ವಚ್ಛತೆ ಕಾಪಾಡುವಂತೆ ಕಸ ವಿಲೇವಾರಿಗೆ ಒತ್ತು ನೀಡುವಂತೆ ಉಪವಿಭಾಗಾಧಿಕಾರಿ ಮುಕುಲ ಜೈ???ರಿಗೆ ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾದಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿ ಡಾ.ಈಶ್ವರ ಉಳ್ಳಾಗಡ್ಡಿ,ಬಿ.ಕೆ.ಡಿ.ಬಿ.ಆಯುಕ್ತ ಜಗನ್ನಾಥ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಓದುಗರ ಅಭಿರುಚಿಗೆ ತಕ್ಕಂತೆ ಪುಸ್ತಕ ಖರೀದಿಸಿ: ಜಿಲ್ಲಾಧಿಕಾರಿ ಡಾ.ಸುಶೀಲ.ಬಿ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಜು:7: ಕೆ.ಕೆ. ಆರ್.ಡಿ.ಬಿ.ಮ್ಯಾಕ್ರೋ ಕ್ರಿಯಾ ಯೋಜನೆಯಡಿ ಜಿಲ್ಲೆಯ ಸ್ಥಳೀಯ ಲೇಖಕರು ಬರೆದ ಪುಸ್ತಕಗಳ ಖರೀದಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತ್ ಗ್ರಂಥಾಲಯಗಳಿಗೆ ಇಂದಿನ ದಿನಮಾನದಲ್ಲಿ ಓದುಗರ ರುಚಿಗೆ ಅನುಗುಣವಾದ ಪುಸ್ತಕಗಳನ್ನು ಪುನರ್ ಆಯ್ಕೆ ಮಾಡುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ .ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕೆ.ಕೆ. ಆರ್.ಡಿ.ಬಿ ಯೋಜನೆಯಲ್ಲಿ ಸ್ಥಳೀಯ ಲೇಖಕರ ಪುಸ್ತಕ ಖರೀದಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆ.ಕೆ.ಆರ್.ಡಿ.ಬಿ ಕಾರ್ಯದರ್ಶಿಗಳ ನಿರ್ದೇಶನದಂತೆ 2024-25ನೇ ಸಾಲಿನ ಕ್ರಿಯಾ ಯೋಜನೆಯಡಿ ಪುಸ್ತಕ ಖರೀದಿಗಾಗಿ 25 ಲಕ್ಷ. ರೂ ಮಂಜೂರಾಗಿದೆ.ಈ ಅನುದಾನಕ್ಕೆ ಅನುಗುಣವಾಗಿ , ಪ್ರತಿ ಪುಸ್ತಕ ನಿಗದಿಪಡಿಸಿದ ದರಗಳಲ್ಲಿ ತಲಾ 1300 ಪ್ರತಿಗಳನ್ನು ಖರೀದಿಸಬೇಕು. ಇವನ್ನು ಜಿಲ್ಲೆಯ ಗ್ರಾಮ ಪಂಚಾಯತ್‌ಗಳಿಗೆ ಸರಬರಾಜು ಮಾಡಬೇಕಾಗಿದ್ದು, ಪುಸ್ತಕಗಳಿಗೆ ನೀಡಿದ ಅನುದಾನದನ್ವಯ ಕ್ರಮವಹಿಸುವಂತೆ ಸೂಚಿಸಿದರು.

ಒಬ್ಬ ಲೇಖಕರಿಂದ ಒಂದು ಪುಸ್ತಕ ಖರೀದಿಸಲು ಜಿಲ್ಲೆಯಲ್ಲಿ 135 ಅರ್ಜಿಗಳನ್ನು

# ಭಾವೈಕ್ಯತೆಯ ಮೊಹರಂ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:ಜು.7: ತ್ಯಾಗ ಬಲಿದಾನಗಳ ಸ್ಮರಣೆ ಮಾಡುವ ಭಾವೈಕ್ಯತೆಯ ಸಂಕೇತವಾದ ಮೊಹರಂ ಹಬ್ಬವನ್ನು ಸರ್ವ ಧರ್ಮದವರು ವಿಜೃಂಭಣೆಯಿಂದ ಆಚರಿಸಿದರು ಮೊಹರಂ ಹಬ್ಬದ ಕೊನೆಯ ದಿನವಾದ ಭಾನುವಾರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಅಲಾಯಿ ದೇವರುಗಳ ಮೆರವಣಿಗೆಯು ವಿಜೃಂಭಣೆಯಿಂದ ನಡೆಯಿತು ಸ್ಥಳೀಯ ರಾಜಭಕ್ಷಾ ವರ್ ದರ್ಗಾದ ಹಾಗೂ ಎರಡು ಮಸೀದಿಗಳ ದೇವರು ಪಟ್ಟಣ ಗಡಿಯಾರ ಚೌಕ್ ನಲ್ಲಿ ಪರಸ್ಪರ ಭೇಟಿ ನೀಡುವ ಮೂಲಕ ಹಬ್ಬ ಆಚರಿಸಲಾಯಿತು ಪಟ್ಟಣದ ಸಾವಿರಾರು ಜನರು ಈ ಸಂದರ್ಭದಲ್ಲಿ ಸೇರಿ ದೇವರ ದರ್ಶನ ಪಡೆದರು ಸಂಜೆ ವೇಳೆಗೆ ಮತ್ತೊಮ್ಮೆ ಭೇಟಿ ನೀಡಿ ನಂತರ ದಫನ್ ಮೂಲಕ ಹಬ್ಬಕ್ಕೆ ವಿದಾಯ ಹೇಳಲಾಯಿತು ಹಬ್ಬವು ಶಾಂತರೀತಿಯಿಂದ ನಡೆದು ಎಲ್ಲಾ ಧರ್ಮದವರು ಪಾಲ್ಗೊಂಡು ಮತ್ತೊಮ್ಮೆ ಭಾವೈಕ್ಯತೆಯ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

# ಜುಲೈ 9 ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7-ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜುಲೈ 9ರಂದು ಬೆಳಿಗ್ಗೆ 10.30 ರಿಂದ ಸಂಜೆ 4.30ರ ತನಕ ನವನಗರದ ಜಿಲ್ಲಾಡಳಿತ ಭವನದಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಮುಧೋಳದ ಕುಮಾರ ಇಂಜಿನಿಯರಿಂಗ್ ಕಂಪನಿಯ ಖಾಲಿ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. 19 ರಿಂದ 30 ವರ್ಷದ ವಯೋಮಿತಿಯ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಹಾಗೂ ಪದವೀಧರರು ಹಾಜರಾಗಬಹುದು. ಆಸ್ತಕರು ಬಯೋಡೇಟಾ ಹಾಗೂ ಮೂಲ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಬೇಕು. ಹೆಚ್ಚಿನ ಮಾಹಿತಿಗಾಗಿ 08354-235337, 7676692029 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ನರಸಿಂಗಪೇಟೆ"ಯಲ್ಲಿ ಹಿಂದುಗಳೇ ಆಚರಣೆ ಮಾಡುವ "ಮೊಹರಂ" ಹಬ್ಬ..!

ಮಲ್ಲಮ್ಮ ನುಡಿ ವಾರ್ತೆ ಸುರಪುರ :ತಾಲೂಕಿನ "ನರಸಿಂಗಪೇಟೆ"ಯಲ್ಲಿ ಮೊರಂ ಹಬ್ಬ ಧಾರ್ಮಿಕ ಭಕ್ತಿ

ಶ್ರದ್ಧಾ, ಸಂಸ್ಕೃತಿ ಮತ್ತು ಸೌಹಾರ್ದತೆ ಹೆಸರಾಯಿತು

ಪ್ರತಿ ವರ್ಷ ಹಿಂದುಗಳೇ ಆಚರಣೆ ಮಾಡುವ ಮೊರಂ ಹಬ್ಬ "ನರಸಿಂಗಪೇಟೆ"ಯಲ್ಲಿ ಈ ಬಾರಿ ಅತ್ಯಂತ ವಿಜೃಂಭಣೆಯಿಂದ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಸೇರಿದಂತೆ ವಿವಿಧ ವಯೋಮಾನದ ನೂರಾರು ಭಕ್ತರು ಈ ಹಬ್ಬದಲ್ಲಿ ಭಾಗವಹಿಸಿ ಧಾರ್ಮಿಕ ನಂಬಿಕೆ, ಸಾಂಸ್ಕೃತಿಕ ಸಂಭ್ರಮ ಮತ್ತು ಬಾಂಧವ್ಯದ ಮೌಲ್ಯಗಳನ್ನು ಪ್ರದರ್ಶಿಸಿದರು. ಮೊಹರಂ ಹಬ್ಬದ ಅಂಗವಾಗಿ ಗ್ರಾಮೀಣ ಸ್ತ್ರೀಯರು ಉಡುಗೊರೆ ಹಾಗೂ ಹಬ್ಬದ ವಿಶೇಷ ಪದಾರ್ಥಗಳೊಂದಿಗೆ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿದರು.




ವಿಶೇಷ ಆಕರ್ಷಣೆ

ಈ ಬಾರಿ ಹಬ್ಬದ ವಿಶೇಷ ಆಕರ್ಷಣೆ ಎಂದರೆ, ಯಾದಗಿರಿ ಜಿಲ್ಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಚನ್ನಬಸಪ್ಪ ಮುಧೋಳ್ ಅವರು ಹುಟ್ಟಿದ ಊರಿಗೆ ನರಸಿಂಗ ಪೇಟೆ ಗೆ ಬಂದು ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡು ಹಳೆಯ ಗೆಳೆಯರೊಂದಿಗೆ ಸಂಭ್ರಮಿಸಿದರು. ಹಬ್ಬದ ಸಂದರ್ಭದಲ್ಲಿ ಅವರು ಗ್ರಾಮದ ಹಿರಿಯರ ಆಶೀರ್ವಾದ ಪಡೆದು, ತಮ್ಮ ಬಾಲ್ಯದ ನೆನಪುಗಳನ್ನು ಮೆಲುಕು ಹಾಕಿದರು "ಇದೇ ಊರಿನ ಮಣ್ಣಿನಲ್ಲಿ ಬೆಳೆದ ನಾನಿಂದು ಈ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವುದು ಹಳೆಯ ನೆನಪುಗಳನ್ನು ತಾಜಾ ಮಾಡುತ್ತದೆ. ಈ ಹಬ್ಬದಲ್ಲಿ ಭಾಗವಹಿಸುವ ಅವಕಾಶ ನನಗೆ ಸಂತೋಷ ತಂದಿದೆ," ಎಂದು ಹೇಳಿದರು.ಸ್ಥಳೀಯ ಮುಖಂಡರ ಪ್ರತಿಕ್ರಿಯೆ ಗ್ರಾಮದ ಇನ್ನೋರ್ವ ಶಿಕ್ಷಕ ಬಸವಣ್ಣಪ್ಪ ಹಂಗರಗಿ ಹಬ್ಬದ ಯಶಸ್ಸು ಕುರಿತು ಮಾತನಾಡುತ್ತಾ, "ಮೊರಂ ಹಬ್ಬ ನಮ್ಮ ಗ್ರಾಮಕ್ಕೆ ಹೊಸ ಉತ್ಸಾಹ ಹಾಗೂ ಭಕ್ತಿಭಾವದಿಂದ ಆಚರಣೆ ನಡೆಯಿತು. ಮುಧೋಳ್ ಅವರ ಉಪಸ್ಥಿತಿಯಿಂದ ಹಬ್ಬಕ್ಕೆ ಇನ್ನಷ್ಟು ಶೋಭೆ ಬಂತು," ಎಂದು ತಿಳಿಸಿದರು.

ಈ ಮೊಹರಂ ಹಬ್ಬವು ನರಸಿಂಗಪೇಟೆಯ ಧಾರ್ಮಿಕ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಸಾಕ್ಷಿಯಾಗಿ, ಗ್ರಾಮಸ್ಥರ ಏಕತೆ, ಬಾಂಧವ್ಯ ಹಾಗೂ ಸಂಸ್ಕೃತಿಯ ಪ್ರತಿರೂಪವಾಯಿತು. ನೂರಾರು ಜನರು ಭಾಗವಹಿಸಿ, ಶಿಸ್ತು ಮತ್ತು ಶ್ರದ್ಧಾಭಕ್ತಿಯಿಂದ ಹಬ್ಬ ಯಶಸ್ವಿಯಾಗಿ ನೆರವೇರಿತು.



ಬಸವಕಲ್ಯಾಣ :– ಹುಲಸೂರ ತಾಲೂಕಿನ ಗಡಿ ಗೌಔಡಗಾಂವ ಗ್ರಾಮದ ಶ್ರೀ ಭಾಗ್ಯವಂತಿ ದೇವಸ್ಥಾನದ ಶ್ರೀದೇವಿ ಧನರಾಜ ಬಿರಾದರ ಅವರ ವತಿಯಿಂದ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರ 848ನೇ ತುಲಾಭಾರ ಮಾಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಅನೇಕರು ಭಕ್ತರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).



ಬಸವಕಲ್ಯಾಣ :– ಹುಲಸೂರ ತಾಲೂಕಿನ ಗಡಿ ಗೌಔಡಗಾಂವ ಗ್ರಾಮದ ಶ್ರೀ ಭಾಗ್ಯವಂತಿ ದೇವಸ್ಥಾನದ ಶ್ರೀದೇವಿ ಧನರಾಜ ಬಿರಾದರ ಅವರ ವತಿಯಿಂದ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರ 848ನೇ ತುಲಾಭಾರ ಮಾಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಅನೇಕರು ಭಕ್ತರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಎಲ್ಲರೂ ಸದ್ಭಾವನೆ ಯಿಂದ ಬದುಕಿ



(ವರದಿ.ಡಿ.ಕೆ.ಪ್ರಹ್ಲಾದಕುಮಾರ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು7 ಎಲ್ಲರೂ ನಮ್ಮವರು ಎಂಬ ಸದ್ಭಾವನೆ ಯಿಂದ ಬದುಕಿ, ಸರ್ವರಲ್ಲಿಯೂ ಶಿವ ಭಾವವನ್ನು ಕಂಡರೆ, ಜೀವನ ಸದ್ಗತಿಯ ಪಥದತ್ತ ಸಾಗುವುದು ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು

ತಾಲೂಕಿನ ಹಾರಕೂಡ ಶ್ರಿಮಠದಲ್ಲಿ ಮಲಕಪ್ಪ ಡಾವರೆ ಪರಿವಾರದ ವತಿಯಿಂದ ಆಯೋಜಿಸಿದ ಗುರುವಂದನೆ ಹಾಗೂ 850ನೇ ತುಲಾಭಾರ ಸಮಾರಂಭದ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ನಾವಿದ್ದ ಜಾಗದಲ್ಲಿಯೇ ಮನಸ್ಸಿನ ಸಮಾಧಾನ ಕಂಡುಕೊಳ್ಳಲು ಸಾಧ್ಯವಾದರೆ ಅದೇ ಧ್ಯಾನ ಮಂದಿರವಾಗಿ ಪರಿಣಮಿಸುತ್ತದೆ. ನಾವಿರುವ ಸ್ಥಳವೇ ಹಿಮಾಲಯ ವಾಗುತ್ತದೆ,ಮನಸ್ಸಿನ ಸ್ಥಿರತೆಯನ್ನು ಸರಳ ಜೀವನ ಕೌಶಲ್ಯವನ್ನು ಅರಿತು ಗುರು ಸಾನಿಧ್ಯದಲ್ಲಿ ತನ್ನನ್ನು ತಾನು ಅರ್ಪಿಸಿಕೊಂಡವನಿಗೆ ಬಂಧನಕ್ಕೆ ಕಾರಣವಾದ ಸಂಸಾರ ಮೋಕ್ಷಕ್ಕೂ ಅಡಿಗಲ್ಲು ಎಂಬ ಜ್ಞಾನ ಉಂಟಾಗಿ ಆತನ ಇಡೀ ಬಾಳು ಸುಂದರವಾಗುತ್ತದೆ.

ಗುರು ಪೀಠದ ಮೇಲೆ ಶ್ರದ್ಧೆ ಇಟ್ಟವರು ಬದುಕಿನಲ್ಲಿ ಖಂಡಿತವಾಗಿ ಶ್ರೇಯಸ್ಸು ಕಾಣುವರು ಎಂದು ನುಡಿದರು. ಮಲಕಪ್ಪ ಡಾವರೆ ಪರಿವಾರದ ಗುರುನಿಷ್ಠೆಉಲ್ಲೇಖನೀಯವಾಗಿದ್ದು, ಪರಿವಾರದ ಎಲ್ಲರಿಗೂ ಹಾಗೂ ಸರ್ವಭಕ್ತರಿಗೂ ಚನ್ನಬಸವ ಶಿವಯೋಗಿಗಳ ಆಶೀರ್ವಾದ ಸದಾ ಶ್ರೀರಕ್ಷೆಯಾಗಿ ಕಾಪಾಡಲಿ ಎಂದು ಶುಭ ಹಾರೈಸಿದರು.ಪಂಡಿತರಾವ ಡಾವರೆ ಮಾತನಾಡಿದರು. ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಹೇಮಲತಾ ಹಿರೇಮಠ,ಶ್ರೀದೇವಿ ಹಿರೇಮಠ,ಮಂಡಲ ಪಂಚಾಯಿತಿ ಮಾಜಿ ಅಧ್ಯಕ್ಷ ಮೇಘರಾಜ ನಾಗರಾಳೆ, ಸುಭಾಷ ಮುರುಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಾದೇವ ಪೂಜಾರಿ, ವಿಜಯಕುಮಾರ ಸಂಗೋಳಗೆ, ಆನಂದರಾವ ಝುಳಕೆ, ರಾಜಣ್ಣ ಬೆಳಮಗಿ, ಶಿವಕುಮಾರ ಓಕಳಿ, ಕಲ್ಯಾಣರಾವ ಪೋಸ್ತೆ,ಕಲ್ಯಾಣರಾವ ಚಿಂಚೋಳಿ, ಶಿವಶರಣಪ್ಪ ಚೌದರಿ, ಕೃಷ್ಣಪ್ಪ ಪಾಟೀಲ, ಚಂದ್ರಶೇಖರ ಸಂಗೋಳಗಿ, ಚಂದ್ರಶ ಮಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸುಮಲತಾ ಡಾವರೆ ಸ್ವಾಗತಿಸಿದರು.

ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ. ಗೌರಮ್ಮ ಓಕಳಿ ವಚನ ನೃತ್ಯ ಪ್ರಸ್ತುತಪಡಿಸಿದರು. ಶಕುಂತಲಾ ಓಕಳಿ ನಿರೂಪಿಸಿದರು.

## ಜುಲೈ 9 ರಂದು ಪ್ರಧಾನಮಂತ್ರಿ ಶಿಶಿಕ್ಷು ಹಾಗೂ ಉದ್ಯೋಗ ಮೇಳ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.07–(ಪು) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಿಲ್ಲೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳು ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಇವುಗಳ ಸಹಯೋಗದೊಂದಿಗೆ ಇದೇ ಜುಲೈ 9 ರಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಐ.ಟಿ.ಐ ಪಾಸಾದ ಹಾಗೂ ಪ್ರಸ್ತುತ ಕೊನೆಯ ವರ್ಷದಲ್ಲಿ ಅಭ್ಯಸಿಸುತ್ತಿರುವ ತರಬೇತಿದಾರರಿಗೆ ಶಿಶಿಕ್ಷು ಹಾಗೂ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ (ಪುರುಷ) ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಈ ಶಿಶಿಕ್ಷು ಹಾಗೂ ಉದ್ಯೋಗ ಮೇಳದಲ್ಲಿ ಕಲಬುರಗಿ ಮತ್ತು ಬೆಂಗಳೂರದಿಂದ ಸುತ್ತಮುತ್ತಲಿನ ಬೃಹತ್ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕೆ ಸೇರಿದಂತೆ ಸುಮಾರು 30 ಉದ್ಯಮೇದಾರರು ಭಾಗವಹಿಸಲಿದ್ದು, ಇಚ್ಚೆಯುಳ್ಳ ಅಭ್ಯರ್ಥಿಗಳು ಮೇಲ್ಕಂಡ ದಿನದಂದು ನಡೆಯುವ ಶಿಶಿಕ್ಷು ಹಾಗೂ ಉದ್ಯೋಗ ಮೇಳಕ್ಕೆ ತಮ್ಮ ಬಯೋಡೆಟಾ, ಎಸ್.ಎಸ್.ಎಲ್.ಸಿ. ಮತ್ತು ಐಟಿಐ ಅಂಕಪಟ್ಟಿ, ಎರಡು ಭಾವಚಿತ್ರ, ಆಧಾರ್ ಕಾರ್ಡ್, ಇತರೆ ಮೂಲ ದಾಖಲಾತಿ ಹಾಗೂ ಝೆರಾಕ್ಸ್ ಪ್ರತಿಗಳೊಂದಿಗೆ ಹಾಜರಾಗಬೇಕು.

ಮತ್ತಿತರ ಮಾಹಿತಿಗಾಗಿ ಸಂಸ್ಥೆಯ ಸೂಚನಾ ಫಲಕದಲ್ಲಿನ ವಿವರ ನೋಡಲು ಹಾಗೂ ಮೊಬೈಲ್ ಸಂಖ್ಯೆ 7259272146, 9844778565 ಮತ್ತು 9481539511 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಫಾತ್ಮಪುರನಲ್ಲಿ; ಭಾವೈಕತೆಯ ಮೊಹರಂ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಹಿಂದೂ ಮುಸ್ಲಿಂ ಭಾವೈಕತೆಯ ಮೊಹರಂ ಹಬ್ಬವನ್ನು ಪಟ್ಟಣದ 23ನೇ ವಾರ್ಡಿನ ಫಾತ್ಮಪುರ್ ಬಡಾವಣೆಯಲ್ಲಿ ಹುಸೇನ್ ಭಾಷಾ, ಲಾಲಾ ಸಾಹೇಬ, ಮೌಲಾಲಿ, ಚಾಂದ್ ಹುಸೇನ ಪೀರನ್ನು 5 ದಿನ ಖವಾಲಿ, ಕಾರ್ಯಕ್ರಮವನ್ನು ಮಾಡಿ 10 ದಿನಕ್ಕೆ ಸಾಹೇಬ್ ಫತರು ಸಾಹೇಬ್, ಷರೀಫ್ ಸಾಹೇಬ್, ಫಾಜಿಲ್ ಸಾಹೇಬ್, ಹಜ್ಜು ಸಾಹೇಬ್ ಅವರು ಓಣಿಯ ತುಂಬಾ ಪೀರ್ (ಅಲ್ಲಂ) ಹಿಡಿದುಕೊಂಡು ಭಕ್ತಾದಿಗಳಿಗೆ ದರುಶನ ನೀಡಿದ್ದರು. ನಂತರ ಪೀರನ್ನು ಘಾಣಿಗೇರ್ ಹೊಲದಲ್ಲಿ ಶಾಂತಗೊಳಿಸಿದರು. ಈ ಸಂದರ್ಭದಲ್ಲಿ ಮಹಾರುದ್ರಯ್ಯ ಸ್ವಾಮಿ, ಸಂಜುರೆಡ್ಡಿ ಮೂಡಬಿ, ಮಲ್ಲಿಕಾರ್ಜುನ ಮಟ್ಟಿ, ಮಾಣಿಕ ರಾಂಪುರ, ಗುಲಾಂ ಮಚ್ಕುರಿ, ರಾಕೇಶ ಬಿರಾದಾರ್, ಮಂಜುನಾಥ ಸ್ವಾಮಿ, ರಾಜರೆಡ್ಡಿ ಮುಡಬಿ, ಮುಬಿನ್, ಹುಸೇನ್, ಅಲಿಮ ಆಲ್ಲೂರ್, ಗೂಡು ಆಲ್ಲೂರ್, ಮಸ್ತಾನ್, ಸೈಯದ್ ಬೇಲೂರ್, ಹುಸೇನ್ ಅಲ್ಲೂರ್, ಅಲೀಮ್ ಹುಡುಗಿ, ನರಸಪ್ಪ ನರನಾಳ, ವೆಂಕಟ ಪೂಜಾರಿ, ರಾಜಕುಮಾರ ಆರ್. ಹಡಪದ, ದೇವಿಂದ್ರ ಸೀತಾಳಗೇರಾ, ಮೋಸಾ ಆಲ್ಲೂರ್, ನರೇಂದ್ರರೆಡ್ಡಿ ರಾಂಪುರ, ರಾಮಣ್ಣ ಮಟ್ಟಿ, ಇರ್ಫಾನ್ ಪಟೇಲ್, ಶ್ರೀಕಾಂತ ಮಟ್ಟಿ, ಭೀಮರೆಡ್ಡಿ, ಗೌಸ್ ಪಟೇಲ್, ರವಿ ಪವರ್, ಸೇರಿದಂತೆ ಸಾವಿರಾರು ಭಕ್ತರಿದರು.

## ನಿರ್ಣಾ; ಭಾವೈಕ್ಯತೆ ಮೆರೆಯುವ ಮೊಹರಂ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಮೊಹರಂ ಹಬ್ಬ ಬಂತೆಂದರೆ ಸಾಕು ಕೇವಲ ಮುಸಲ್ಮಾನರು ಮಾತ್ರವಲ್ಲದೆ ಹಿಂದೂ ಜನರು ಸೇರಿಕೊಂಡು ಭಾವೈಕ್ಯತೆ ಮೆರೆಯುವ ಮೊಹರಂ ಹಬ್ಬವನ್ನು ತಾಲೂಕಿನ ನಿರ್ಣಾ ಗ್ರಾಮದಲ್ಲಿ ಸಡಗರ ಸಂಭ್ರಮದಿಂದ ದೊಡ್ಡ ಹುಸೇನಸಾಬ್ ಸವರಿ ಅತ್ಯಂತ ವಿಜೃಂಭಣೆಯಿಂದ ಹಿಂದೂ–ಮುಸಲ್ಮಾನರು ಎಲ್ಲರೂ ಒಟ್ಟಿಗೆ ಸೇರಿಕೊಂಡು ಮೊಹರಂ ಹಬ್ಬವನ್ನು ಆಚರಿಸಿದರು. ಈ ಸಂದರ್ಭದಲ್ಲಿ ಶೈಲೇಂದ್ರ ಪೊಲೀಸ್ ಪಾಟೀಲ್, ಅಶೋಕ ಕಾಗೆ, ಲಕ್ಷ್ಮಣರಾವ ಸಾತನೋರ್, ಮುಸ್ತಫಾ ಕಮಲಾಪುರ, ಮಕಬೂಲಸಾಬ್ ಎಬಾಳಿ, ವಸಿಮ್ ಪಟೇಲ್, ಭರತ್ ರೆಡ್ಡಿ ಚಿಟನಳ್ಳಿ, ಕಲಿಮಸಾಬ್ ಕಮಲಾಪುರ, ಅಮರ ತೆಳಮನಿ ರಾಜಕುಮಾರ ಮೇತ್ರೆಸ್ಕರ್, ಅಲ್ಲಿಮಸಾಬ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶಿವಪೂರ: ಅದ್ದೂರಿಯಾಗಿ ಜರುಗಿದ ಮೊಹರಂ ಹಬ್ಬ ಆಚರಣೆ



ಪೀರ ದೇವರು ಒಬ್ಬರಿಗೊಬ್ಬರು ಭೇಟ್ಟಿ ಮಾಡಿರುವ ದೃಶ್ಯ ಕಾಣಬಹುದು.

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಹಿಂದು ಮತ್ತು ಮುಸ್ಲಿಂ ಎರಡು ಧರ್ಮಗಳು ಸೇರಿ ಜಾತಿ ಭೇದವನ್ನು ಮರೆತು ಮಾನವರೆಲ್ಲರು ಒಂದೆ ಎಂಬ ಮನೋಬಾವುಳ್ಳ ಹಬ್ಬವಾಗಿದ್ದು, ಹಿಂದು ಮತ್ತು ಮುಸ್ಲಿಂ ಬಾಯ್ ಬಾಯ್ ಎಂದು ಭಾನುವಾರ ಹಸನ್ ಮತ್ತು ಹುಸೇನ್ ಪೀರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ವಿಜೃಂಭಣೆಯಿಂದ ಪಟ್ಟಣದ ಶಿವಪೂರ ಬಡಾವಣೆಯಲ್ಲಿ ಮೊಹರಂ ಹಬ್ಬವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಹ್ಮದ್ ದಸ್ತಗೀರ್ ಸಾಬ್ ಮಿಲಾದವಾಲೆ ಮಾತನಾಡಿ, ವರ್ಷಕೊಮ್ಮೆ ಮೊಹರಂ ತಿಂಗಳಿನಲ್ಲಿ ಪಟ್ಟಣದ ಎಲ್ಲ ಜನಾಂಗದವರು ಒಗ್ಗಟಿನಿಂದ ಯಾವುದೇ ಘಟನೆಗಳಿಗೆ ಎಡಮಾಡದೆ ಸಂತೋಷದಿಂದ ಅರ್ಚರಿಸುತ್ತೇವೆ ಎಂದರು. ಹಿಂದು – ಮುಸ್ಲಿಂ ಬಾಂಧವರು ಜೊತೆಯಾಗಿ ಹೊಸಬಟ್ಟೆ ತೊಟ್ಟು ಅಲಾವಿ ಕುಣಿತಕ್ಕೆ ಹೆಜ್ಜೆ ಹಾಕಿದರು. ಮೊಹರಂ ಹಬ್ಬ ಆಚರಣೆಯಲ್ಲಿ ನೂರಾರು ವರ್ಷಗಳಿಂದ ಮುಂದುವರಿದುಕೊಂಡು ಬಂದಿದ್ದು, ಭಾವೈಕ್ಯತೆಯ ಪ್ರತೀಕವಾಗಿದೆ. ಇಂದಿಗೂ ಸಹ ಎಲ್ಲರು ಸೇರಿ–ಕೊಂಡು ಮೊಹರಂ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು ಎಂದರು. ಈ ವೇಳೆ ಪೀರ್ ದೇವರುಗಳ ಮೆರವಣಿಗೆ ಅದ್ದೂರಿಯಾಗಿ ನಡೆಯಿತು. ಹಸನ್ ಮತ್ತು ಹುಸೇನ್‌ರ ಅಲಂ ಮೆರವಣಿಗೆಗಳು, ಧರ್ಮ, ಜಾತಿ ಮೀರಿ ಜನತೆಯನ್ನು ಒಗ್ಗೂಡಿಸುತ್ತವೆ. ಪೀರಗಳಿಗೆ ಹೂವಿನಿಂದ ಅಲಂಕರಿಸಿ ಮೆರವಣಿಗೆ ಪ್ರಮುಖ ಬೀದಿಗಳ ಮುಖಾಂತರ ಮಾಡಲಾಯಿತ್ತು. ವಿವಿಧೆಡೆ ಸಂಚರಿಸಿದ ಪೀರ್ ದೇವರುಗಳಿಗೆ ನಮಿಸಿದ ಜನತೆ ಕಾಯಿ, ಊದು, ಸಕ್ಕರೆ ಲೋಬನ ಕೊಟ್ಟು ಇಷ್ಟಾರ್ಥ ಸಿದ್ಧಿಗೆ ಪ್ರಾರ್ಥಿಸಿದರು ಎಂದರು. ಭಕ್ತಾಧಿಗಳು ದೇವರಿಗೆ ನೈವಿದ್ಯವನ್ನು ಆರ್ಪಿಸಿ ದರ್ಶನ ಪಡೆದರು. ಎಂ.ಡಿ.ಬಾಡೇಸಾಬ್, ಎಂ.ಡಿ ಜೀಲಾನಿ ಸಾಬ್, ತೋಹಿದ್ ಖಾದ್ರಿ, ಎಂ.ಡಿ ಮಝುರ್, ಸೈಯದ್ ಇಬ್ರಾಹಿಂ, ಎಂ.ಡಿ.ಮದರ್ ಹಾಗೂ ಭಕ್ತಾದಿಗಳಿದ್ದರು. ಯಾವುದೇ ಘಟನ ಆಗದಂತೆ ಪೊಲೀಸ್ ಬೀಗಿ ಬದೋಬಸ್ತ್ ಏರ್ಪಡಿಸಲಾಯಿತು.



ಬಸವಕಲ್ಯಾಣ :– ಇಲ್ಲಿನ ಶಾಹಪೂರ ಓಣಿಯಲಿ ಇರುವ ಅಂಕಣ–ಕಾರರಾದ ನಾಗಪ್ಪಾ ನಿಣ್ಣೆ ಯವರ ನಿವಾಸದ ಮುಂದೆ ಅರಳಿದ ಬೃಹಮ್ಮ ಕಮಲ ಹೂವು ಗಳು ಸುವಾಸನೆ ಬಿರುವದರೂಂದಿಗೆ ನೋಡುಗರ ಗಮನ ಸೆಳೆದವು. (ಮಲ್ಲಮ್ಮ ನುಡಿ ಚಿತ್ರ).

## ಜಿಲ್ಲೆಯಲ್ಲಿ ದೇಶಕ್ಕಾಗಿ ಮಧ್ಯಸ್ಥಿಕೆ ವಿಶೇಷ ಅಭಿಯಾನ

ಕಲಬುರಗಿ,ಜು.07–ನವದೆಹಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ಜುಲೈ 1 ರಿಂದ ಅಕ್ಟೋಬರ್ 7 ರವರೆಗೆ ದೇಶಕ್ಕಾಗಿ ಮಧ್ಯಸ್ಥಿಕೆ ಎನ್ನುವ 90 ದಿನಗಳ ಕಾಲ ವಿಶೇಷ ಅಭಿಯಾನ ಹಮ್ಮಿಕೊಂಡಿದೆ. ಕಲಬುರಗಿ ಜಿಲ್ಲೆಯಲ್ಲಿಯೂ ಸಹ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ತಿಳಿಸಿದ್ದಾರೆ.

## ಕಾಳೆಬೆಳಗುಂದಿ, ಗ್ರಾಮ ಪಂಚಾಯತ ಅಧ್ಯಕ್ಷರ ಹಾಗು ಪಿ, ಡಿ, ಓ, ವಿರುದ್ದ ಭ್ರಷ್ಟಾಚಾರದ ಆರೋಪ,

(ಮಹಾಂತೇಶ ಎಸ್)

ಮಲ್ಲಮ್ಮ ನುಡಿ ವಾರ್ತೆ



ಗುರುಮಠಕಲ, ಜೂ. 7– ತಾಲೂಕಿನ ಕಾಳೆಬೆಳಗುಂದಿ ಗ್ರಾಮ ಪಂಚಾಯತಿಯಲ್ಲಿ ಸಿಬ್ಬಂದಿಗಳಾದ ಚಂದ್ರಶೇಖರ ತಂದೆ ಬನ್ನಪ್ಪ, ಶಂಕ್ರಪ್ಪ ತಂದೆ ನರಸಪ್ಪ, ಅಶಪ್ಪ ತಂದೆ ಮಲ್ಲಪ್ಪ, ಅಂಜಪ್ಪ ತಂದೆ ಬಸಪ್ಪ ಇವರು ಗ್ರಾಮ ಪಂಚಾಯತಿಯಲ್ಲಿ ಪಂಪ್ ಅಪರೇಟರ್ ಗಳಾಗಿ ಗುತ್ತಿಗೆ ಅಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದು, ಅಲ್ಲಿನ ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸಿಬ್ಬಂದಿಗಳಿಗೆ

ನೀಡುವ ವೇತನ ದುರ್ಬಳಕೆ ಮಾಡಿಕೊಂಡು ಅವರ ಮಾಸಿಕ ವೇತನಕ್ಕೆ ಕಂಟಕ ತಂದಿದ್ದಾರೆ.

ನಾಲ್ಕು ಜನರ ಖಾತೆಗಳಿಗೆ ಮುಂಗಡವಾಗಿ ವೇತನ ಜಮಾ ಮಾಡಿ ಅದನ್ನು ಪಂಚಾಯತಿ ಮೆಟೆರಿಯಲ್ ಕೆಲಸಕ್ಕಾಗಿ ಬಂದಿರುವ ಹಣ ಎಂದು ನಂಬಿಸಿ ಅವರಿಂದ ಬೇರೆ ಬೇರೆ ಖಾತೆಗಳಿಗೆ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶೃತಿ ಗಂಡ ವೆಂಕಟೇಶ್ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಿವ ಶರಣಪ್ಪ ಅಲ್ಲಿಪುರ ಆದೇಶದಂತೆ ಹಣ ವರ್ಗಾವಣೆ ಮಾಡಿದ್ದಾರೆ, ತಿಂಗಳುಗಳೇ ಕಳೆದರೂ ವೇತನವಾಗದೆ ಇರುವುದನ್ನು ಪ್ರಶ್ನಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹತ್ತಿರ ಮಾಹಿತಿ ಪಡೆದಾಗ ವೇತನ ಪುಸ್ತಕದಲ್ಲಿ ಸಿಬ್ಬಂದಿಗಳ ವೇತನ ಪಾವತಿಸಲಾಗಿದೆ ಎಂದು ಕಂಡು ನಿಬ್ಬೆರಗಾಗಿದ್ದಾರೆ ಸಿಬ್ಬಂದಿ. ಒಟ್ಟು ರೂ. 99,886/– ರಂತೆ ಒಟ್ಟು 04 ಜನರಿಗೆ ಒಟ್ಟು ರೂ.3,99,544/–ಹಣವನ್ನು ವೇತನ ಪುಸ್ತಕದಲ್ಲಿ ಸಿಬ್ಬಂದಿ ನಕಲಿ ಸಹಿ ನಮೂದಿಸಿ ಬಡ ಸಿಬ್ಬಂದಿಗಳಿಗೆ ಮೋಸ–ವಂಚನೆ ಮಾಡಿದ್ದಾರೆ.

ಆಸಕ್ತಿಕರ ವಿಷಯ ಎನ್ನುವಂತೆ ತನಿಖೆ ವರದಿಯಲ್ಲಿ ಪಿಡಿಓ ರವರ ಹೇಳಿಕೆಯಲ್ಲಿ ನಾನು ನನ್ನ ಸಂಸಾರದ ಸಲುವಾಗಿ 2 ಲಕ್ಷ ಮಾತ್ರ ಇಬ್ಬರಿಂದ ಮಾತ್ರ ಒಪ್ಪಿಗೆಯಂತೆ ಪಡೆದಿರುತ್ತೇನೆ ಎಂದು ಹೇಳಿಕೆ ನೀಡಿರುತ್ತಾರೆ, ಒಪ್ಪಿಗೆ ಮೇಲೆ ನೀಡಿದ್ದರೆ ನಿಮ್ಮ ಮೇಲೆ ಕ್ರಮ ಆಪರೇಟರ್ ಗಳು ಯಾಕೆ ಅವರ ಮೇಲೆ ದೂರು ನೀಡಿರುವುದು ಇವರ ಭ್ರಷ್ಟಚಾರದ ಕುರಿತು ಪುರಾವೆಯಾಗಿದೆ.

ಈ ಕುರಿತಾಗಿ ವಂಚನೆಗೆ ಒಳಗಾದ ಸಿಬ್ಬಂದಿಗಳು ಜಿಲ್ಲಾ ಪಂಚಾಯತಿ ಹಾಗೂ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕರ ಗಮನಕ್ಕೆ ತಂದು ಮನವಿ ನೀಡಿದ ಪ್ರಯುಕ್ತ ತನಿಖಾ ಅಧಿಕಾರಿಗಳು ವರದಿ ಸಲ್ಲಿಸಿ 6 ತಿಂಗಳಾದರೂ ಕೂಡಾ ಇನ್ನೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಕೂಡಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಅಲ್ಲಿಪುರ ಅವರನ್ನು ತಕ್ಷಣ ವಜಾಗೊಳಿಸಿ, ಸದರಿ ಹಣ ಮರಳಿ ವಾಪಾಸು ಪಡೆದು ಕ್ರಮಕ್ಕೆ ಮುಂದಾಗಬೇಕು ಇಲ್ಲವಾದಲ್ಲಿ ಜಿಲ್ಲಾ ಘಟಕ ಹಾಗೂ ಗುರುಮಠಕಲ್ ತಾಲೂಕ ಜಯ ಕರ್ನಾಟಕ ಸಂಘಟನೆ ವತಿಯಿಂದ ಜಿಲ್ಲಾ ಪಂಚಾಯತಿ ಕಛೇರಿ ಮುಂದೆ ಉಗ್ರವಾದ ಹೋರಾಟ ಮಾಡುವುದಾಗಿ ಪತ್ರಿಕಾಗೋಷ್ಠಿಯಲ್ಲಿ ನಾಗೇಶ್ ಗದ್ದಗಿ ಗುರುಮಠಕಲ್ ತಾಲೂಕ ಅಧ್ಯಕ್ಷರು ತಿಳಿಸಿದ್ದಾರೆ.

## ಸಚಿವೆ ಹೆಬ್ಬಾಳಕರ್ ಹಾಗೂ ಇತರರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 07 : ರಾಜ್ಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ 'ನಾಗರಿಕರ ಸಬಲೀಕರಣ ಮತ್ತು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಮತ್ತು ಪೌರಾಡಳಿತ ಹಾಗೂ ಹಜ್ ಖಾತೆ ಮಂತ್ರಿ ರಹಿಮ್ ಖಾನ್, ರಾಜ್ಯದ ಅರಣ್ಯ, ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರಿಗೆ ಬೀದರ ವಿಮಾನ ನಿಲ್ದಾಣದಲ್ಲಿ ಪತ್ರಕರ್ತರು ಹಾಗೂ ಉದ್ಯಮಿ ದೀಪಕ ವಾಲಿ, ವಿವೇಕ ವಾಲಿ ಸ್ವಾಗತಿಸಿ, ಸನ್ಮಾನಿಸಿ, ತಮ್ಮ ನಿವಾಸಕ್ಕೆ ಬರಮಾಡಿಕೊಂಡು ಶುಭ ಹಾರೈಸಿದರು. ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ, ವಾಲಿ ಕುಟುಂಬಸ್ತರಾದ ಪಲ್ಲವಿ ವಿವೇಕ ವಾಲಿ.. ಸಂಗೀತಾ ದೀಪಕ ವಾಲಿ ಹಾಗೂ ಇತರರಿದ್ದರು.

# ನನ್ನವ್ವನ ಜನಪದ ಸಿರಿ ಕೃತಿ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ ಔರಾದ್ :ಜು.7: ಜನಪದ ಸಂಸ್ಕೃತಿಯನ್ನು ಪೋಷಿಸುವ ಹಾಗೂ ಮುಂದಿನ ಪೀಳಿಗೆಗೆ ವರ್ಗಾಯಿಸುವನಿಟ್ಟಿನಲ್ಲಿ ನನ್ನವ್ವನ ಜನಪದ ಕೃತಿ ಮಹತ್ವದ ಪಾತ್ರ ವಹಿಸಲಿದೆ ಎಂದು ಕಲಬುರ್ಗಿ ಹಿರಿಯ ಸಾಹಿತಿ ಡಾ.ಕಾವ್ಯಶ್ರೀ ಮಹಾಗಾಂವಕರ್ ಅಭಿಪ್ರಾಯಪಟ್ಟರು.ತಾಲೂಕಿನ ನಾಗೂರ್ (ಬಿ) ಗ್ರಾಮದಲ್ಲಿ ಭಾನುವಾರ ಬಿಡುಗಡೆಯಾದ ನನ್ನವ್ವನ ಜನಪದ ಸಿರಿ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಆಧುನಿಕತೆ ತಂತ್ರಜ್ಞಾನದ ಪ್ರಸ್ತುತ ಕಾಲದಲ್ಲಿ ಜನಪದ ಸೊಗಡು ತುಂಬಿಕೊಂಡ ಈ ಕೃತಿ ತುಂಬ ವಿಶೇಷವಾಗಿದೆ.

ಕೃತಿಯಲ್ಲಿ ಬೀದರ್ ಭಾಷೆ ಹಾಗೂ ಹಾಡಿನ ಧಾಟಿಗೆ ಪೂರಕವಾದ ವ್ಯಾಕರಣಾಂಶ ಅನಾವರಣಗೊಳಿಸಿರುವ ಸಂಪಾದಕಿ ಶಾಂತಮ್ಮ ಬಲ್ಲೂರ್ ಅವರ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ತನ್ನ ತಾಯಿ ತುಳಸಮ್ಮ ಸಂಗ್ರಾಮ ಸಿಂಧೆ ಅವರಲ್ಲಿನ ಹಾಡುಗಳಿಗೆ ಅಕ್ಷರ ರೂಪ ನೀಡಿರುವುದು ಒಂದು ಸಂಶೋಧನಾ ಕೃತಿಗಿಂತಲೂ ಮಿಗಿಲಾಗಿದೆ ಎಂದರು.ಸಮಾರಂಭ ಉದ್ಘಾಟಿಸಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎಂ ಅಮರವಾಡಿ, ಪ್ರಸ್ತುತ ನಶಿಸುತ್ತಿರುವ ಜನಪದ ಸಂಸ್ಕೃತಿಯನ್ನು ನಾವುಗಳು ಪೋಷಿಸುವ ಅಗತ್ಯವಿದೆ. ಜನಪದದಲ್ಲಿ ಜೀವನ ಮೌಲ್ಯಗಳು, ನೈತಿಕ ಪಾಠಗಳಿವೆ ಬದುಕಿಗೆ ದಾರಿದೀಪವಾಗುವ ಮಹತ್ವದ ಸಂದೇಶಗಳಿವೆ.ತುಳಸಮ್ಮ ಸಿಂಧೆ ಅವರಲ್ಲಿನ ನಮ್ಮ ನೆಲಮೂಲ ಸಂಸ್ಕೃತಿ ನಶಿಸದಂತೆ ತನ್ನ ಜನಪದ ತಾಯಿಯನ್ನು ಜೀವಂತವಾಗಿಡುವ ಸಂಪಾದಕಿ ಶಾಂತಮ್ಮ ಬಲ್ಲೂರ್ ಅವರ ಕಾರ್ಯ ಅನುಪಮವಾಗಿದೆ. ಯುವ ಸಮೂಹ ಮೊಬೈಲ್‌ಗೆ ಬಲಿಯಾಗದೇ ಇಂತಹ ಕೃತಿಗಳ ಅಧ್ಯಯನ ನಡೆಸಬೇಕು ಮತ್ತು ಗ್ರಾಮೀಣ ಪ್ರದೇಶದಲ್ಲಿನ ಅನೇಕ ತಾಯಿಯಂದಿರಲ್ಲಿನ ಜನಪದ ಹಾಡುಗಳ ಸಂಗ್ರಹಕ್ಕೆ ಮುಂದಾಗಬೇಕು ಎಂದರು.

ಹಿರಿಯ ಸಾಹಿತಿ ಹಂಸಕವಿ ನಾಗೂರ್(ಬಿ) ಗ್ರಾಮದ ಹಿನ್ನೆಲೆ, ವಿಶೇಷತೆ ಮತ್ತು ಸಂಪಾದಕಿ ಶಾಂತಮ್ಮ ಬಲ್ಲೂರ್ ಅವರ ಪರಿಚಯ ಮಾಡಿಕೊಟ್ಟರು. ಇದೇ ಸಂದರ್ಭದಲ್ಲಿ ಜನಪದ ಹಾಡುಗಾರ್ತಿ ತುಳಸಮ್ಮ ಸಿಂಧೆ ಹಾಗೂ ಸಂಪಾದಕಿ ಶಾಂತಮ್ಮ ಬಲ್ಲೂರ್ ಅವರಿಗೆ ಕನ್ನಡ ಸಾಹಿತ್ಯ ಪರಿಷತ್ತು ಸೇರಿದಂತೆ ಗ್ರಾಮಸ್ಥರು, ಸಾಹಿತ್ಯಾಸಕ್ತರಿಂದ ಸನ್ಮಾನಿಸಿ ಗೌರವಿಸಲಾಯಿತು.ಸಮಾರಂಭದಲ್ಲಿ ಕಲ್ಲಪ್ಪ ಪಾಂಚಾಳ ಹಾಗೂ ಸವಿತಾ ಕರಸೊಣ್ಣೆ ಅವರ ಮಾರ್ಗದರ್ಶನದಲ್ಲಿ ಜ್ಞಾನಭಾರತಿ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು. ಸಾಹಿತಿ ಚೆನ್ನಮ್ಮ ವಲ್ಲಾಪೂರೆ, ಸ್ಯಾಮಸನ್ ಬಲ್ಲೂರ, ಗುರುನಾಥ ದೇಶಮುಖ, ಪ್ರಕಾಶ ದೇಶಮುಖ, ಬಸವರಾಜ ಮಸ್ಕಲೆ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಯಕ್ಷಗಾನ ಪ್ರದರ್ಶನ ನಾಳೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 07 : ದಕ್ಷಿಣ ಕರಾವಳಿ ಕನ್ನಡ ಸಂಘದ ವತಿಯಿಂದ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಜುಲೈ 9 ರಂದು ಸಂಜೆ 5.30ಕ್ಕೆ ಯಕ್ಷಗಾನ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಉಡುಪಿ ಜಿಲ್ಲೆಯ ಮಂದರ್ತಿಯ ಶ್ರೀ ಮಹಾ ಗಣಪತಿ ಯಕ್ಷಗಾನ ಮಂಡಳಿಯ ಕಲಾವಿದರು 'ಭಸ್ಮಾಸುರ ಮೋಹಿನಿ' ಹಾಸ್ಯಮಯ ಪೌರಾಣಿಕ ಕಥಾ ಭಾಗವನ್ನು ಯಕ್ಷಗಾನದ ಮೂಲಕ ಪ್ರದರ್ಶಿಸಲಿದ್ದಾರೆ. ಕೊಕ್ಕರ್ಣೆ ಸದಾಶಿವ ಅಮೀನ್, ಗಣೇಶ ಆಚಾರ್ಯ ಬಿಲ್ಲಾಡಿ ಗಾಯನ, ಭಾಸ್ಕರ ದೇವಾಡಿಗ ಭಟ್ಕಳ, ಕುಮಾರ ಅಮೀನ್ ಕೊಕ್ಕರ್ಣೆ ಮೃದಂಗ, ಸತೀಶಕುಮಾರ ಹಾಲಾಡಿ ಹಾಸ್ಯಪಾತ್ರ, ದಿನಕರ ಕುಂದರ್ ನಡೂರು, ನಾಗರಾಜ ಪೂಜಾರಿ ದೇವಲ್ಕುಂದ, ರಾಜೇಶ ಶೆಟ್ಟಿ ಮೇಗರವಳ್ಳಿ ಸ್ತ್ರೀ ಪಾತ್ರ, ಚಿಟ್ಟಾಣಿ ನರಸಿಂಹ ಹೆಗಡೆ, ವಿಶ್ವನಾಥ ಪೂಜಾರಿ, ಹರೀಶ್ ಚಂದ್, ನಂದೀಶಕುಮಾರ, ಪ್ರಮೋದ್ ಪೂಜಾರಿ, ರಜಿತಕುಮಾರ ಪುರುಷಪಾತ್ರದಲ್ಲಿ ಅಭಿನಯಿಸಲಿದ್ದಾರೆ. ದಿನೇಶ್ ಪೂಜಾರಿ ವೇಷಭೂಷಣ, ಕೃಷ್ಣ ಶೆಟ್ಟಿ ಶಿವಪುರ ಧ್ವನಿವರ್ಧಕ ಸೇವೆ ನೀಡಲಿದ್ದಾರೆ ಎಂದು ಬೀದರನ ದಕ್ಷಿಣ ಕರಾವಳಿ ಕನ್ನಡ ಸಂಘದ ಅಧ್ಯಕ್ಷರು ತಿಳಿಸಿದ್ದಾರೆ.

ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ಕಿತ್ತೂರ್ ರಾಣಿ ಚೆನ್ನಮ್ಮ ಮಹಿಳಾ ಮಂಡಳದಿಂದ ಸಸಿ ನೆಡುವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ ಬೀದರ.ಜು.07:ನಗರದಲ್ಲಿ ಗುಂಪಾ ರಸ್ತೆ ಟೀಚರ್ಸ್ ಕಾಲೋನಿಯ ಹತ್ತಿರ ಕಿತ್ತೂರ ರಾಣಿ ಚನ್ನಮ್ಮ ಮಹಿಳಾ ಮಂಡಳದ ಶಕ್ತಿಸದನ ಕೇಂದ್ರದಲ್ಲಿ ಪರಿಸರ ದಿನಾಚರಣೆಯನ್ನು ದಿನಾಂಕ 06/06/2025 ರಂದು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಅಧ್ಯಕ್ಷೀಯ ಸ್ಥಾನ ವಹಿಸಿದ ಶಕ್ತಿಸದನ ಕೇಂದ್ರದ ಮೇಲ್ವಿಚಾರಕಿಯ ರಾಧಾ ಶ್ರೀಮತಿ

ಫಿಲಾಸಾವಾತಿರವರು ಸಸಿ ನೆಡುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಅವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಪರಿಸರ ರಕ್ಷಣೆ ಮಾಡದಿದ್ದರೆ ಮುಂದಿನ ಪೀಳಿಗೆಗೆ ಮಾರಕವಾಗಲಿದೆ ಎಂದು ಎಚ್ಚರಿಕೆ ಕೊಟ್ಟರು. ಪರಿಸರ ರಕ್ಷಣೆ-ಯು ಕೇವಲ ಸರ್ಕಾರದಿಂದ ಮಾತ್ರ ಸಾಧ್ಯವಿಲ್ಲ ಎಂದು ತಿಳಿಸುತ್ತಾ ಪ್ರತಿಯೊಬ್ಬರೂ ಪರಿಸರ ರಕ್ಷಣೆಯಲ್ಲಿ

ಕೈ ಜೋಡಿಸಬೇಕೆಂದು ಕರೆ ನೀಡಿದರು.

ಮಾನವರು ಸ್ವಾರ್ಥಕ್ಕಾಗಿ ಮರಗಳು ಮಾರಣ ಹೋಮ ಮಾಡುತ್ತಿದ್ದಾರೆ. ಇದನ್ನು ತಡೆಗಟ್ಟಲು ಸರ್ಕಾರವು ಕಠಿಣವಾದ ಕಾನೂನು ರೂಪಿಸಬೇಕೆಂದು ತಿಳಿಸಿದರು.

ಈ ಕಾರ್ಯಕ್ರಮಕ್ಕೆ ಶ್ರೀಮತಿ ಗೀತಾಶ್ರೀ ಹರಿಹರವರು ಸ್ವಾಗತ ಹಾಗೂ ವಂದನಾರ್ಪಣೆ

ಮಾಡಿದರು. ಸಾಂತ್ವನ ಕೇಂದ್ರದ ಸಿಬ್ಬಂದಿಗಳು ಹಾಗೂ ಅಲಾನಿಭಾವಿಗಳು ಉಪಸ್ಥಿತರಿದ್ದರು.

# ಮೊಹರಂ; ಪೀರಲ ದೇವರ ಮೆರವಣಿಗೆ, ಭಕ್ತರ ದರ್ಶನ



ಬೀದರ. ಜು. 07 : ನಗರ ಸೇರಿದಂತೆ ಜಿಲ್ಲೆಯಾದ್ಯಂತ ಭಾನುವಾರ ಮೊಹರಂ ಆಚರಿಸಲಾಯಿತು. ಪೀರಲ ದೇವರುಗಳನ್ನು ಅಲಂಕರಿಸಿ, ಪೂಜೆ ಸಲ್ಲಿಸಿ ನೈವೇದ್ಯ ಸಮರ್ಪಿಸಲಾಯಿತು. ಮಕ್ಕಳು, ಯುವಕರು, ವಯಸ್ಕರು ಹುಲಿ ಹೋಲುವ ರೀತಿಯಲ್ಲಿ ಮೈಗೆ ಬಣ್ಣ ಬಳಿದುಕೊಂಡು, ತಮಟೆ ನಾದಕ್ಕೆ ಹೆಜ್ಜೆ ಹಾಕಿ ಹರಕೆ ತೀರಿಸಿದರು. ನಗರದ ಸಿದ್ದಿ ತಾಲೀಮ್, ಮೈಲೂರ, ಚಿದ್ರಿ, ತಾಲ್ಲೂಕಿನ ಅಮಲಾಪೂರ, ಚಿಟ್ಟಾ, ಬಗದಲ್, ಕಮಠಾಣ, ಚಿಟಗುಪ್ಪ ತಾಲ್ಲೂಕಿನ ಮನ್ನಾಏಖ್ಖೆಳ್ಳಿ ಸೇರಿದಂತೆ ಜಿಲ್ಲೆಯ ಹಲವೆಡೆ ಸೌಹಾರ್ದಿಂದ ಹಬ್ಬ ಆಚರಿಸಲಾಯಿತು. ಹಿಂದೂ, ಮುಸ್ಲಿಮರು ದೇವರಿಗೆ ಪೂಜೆ ಸಲ್ಲಿಸಿ, ದರ್ಶನ ಪಡೆದದ್ದು ವಿಶೇಷ. ಇನ್ನು ಶನಿವಾರ ಮಧ್ಯರಾತ್ರಿ ಕತ್ತಲರಾತ್ರಿ ಆಚರಿಸಲಾಯಿತು. ಕೆಲವೆಡೆ ಕೆಂಡ ತುಳಿದು ಭಕ್ತರು ಹರಕೆ ತೀರಿಸಿದರೆ, ಕೆಲವು ಕಡೆಗಳಲ್ಲಿ ಪೀರಲ ದೇವರನ್ನು ಹೊತ್ತು ನಗರದಲ್ಲಿ ಮೆರವಣಿಗೆ ಮಾಡಿದರು. ಪಟಾಕಿ ಸಿಡಿಸಿ, ತಮಟೆ ಬಾರಿಸಿ ಕುಣಿದು ಕುಪ್ಪಳಿಸಿದರು. ಬೆಳಗಿನ ವರೆಗೆ ದೇವರ ಸ್ತುತಿಸುವ ಹಾಡುಗಳನ್ನು ಹಾಕಿ, ಭಜಿಸಿದರು. ನಗರದಲ್ಲಿ ಇರಾನಿ ಮೂಲದವರು ದೊಡ್ಡ ಸಂಖ್ಯೆಯಲ್ಲಿ ಸೇರಿ ದೇವರ ಮೆರವಣಿಗೆ ಮಾಡಿದರು. ದೇಹವನ್ನು ದಂಡಿಸುತ್ತ ಹೆಜ್ಜೆ ಹಾಕಿದರು. ಇದನ್ನು ಕಣ್ತುಂಬಿಕೊಳ್ಳಲು ಅಪಾರ ಸಂಖ್ಯೆಯ ಜನ ಸೇರಿದ್ದರು. ನಗರದ ಇರಾನಿ ಕಾಲೊನಿಯಿಂದ ಆರಂಭಗೊಂಡ ಮೆರವಣಿಗೆ ಪ್ರಮುಖ ಮಾರ್ಗಗಳ ಮೂಲಕ ಪುನಃ ಅಲ್ಲಿಗೆ ತಲುಪಿತು.

# ಸಿ.ಬಿ. ಸೋಮಶೆಟ್ಟಿ ಆರ್ಟ್ ಗ್ಯಾಲರಿಗೆ ರೂ. 50 ಸಾವಿರ ದೇಣಿಗೆ



ಬೀದರ ಜು. 07 : ನಿವೃತ್ತ ಚಿತ್ರಕಲಾ ಶಿಕ್ಷಕ ಸಿ.ಬಿ. ಸೋಮಶೆಟ್ಟಿ ಅವರು ಇಲ್ಲಿಯ ಬಸವನಗರದಲ್ಲಿ ನಿರ್ಮಿಸಿರುವ ಬಸವಣ್ಣನವರ ಜೀವನ ಚರಿತ್ರೆ ಬಿಂಬಿಸುವ ಚಿತ್ರಗಳ 'ಸಿ.ಬಿ. ಸೋಮಶೆಟ್ಟಿ ಆರ್ಟ್ ಗ್ಯಾಲರಿ'ಗೆ ಬಸವ ಕಾಯಕ ದಾಸೋಹ (ಬಿಕೆಡಿ) ಫೌಂಡೇಷನ್ ರೂ. 50 ಸಾವಿರ ದೇಣಿಗೆ ನೀಡಿದೆ.

ಭಾನುವಾರ ನಡೆದ ಆರ್ಟ್ ಗ್ಯಾಲರಿಯ ಉದ್ಘಾಟನಾ ಸಮಾರಂಭದಲ್ಲಿ ಫೌಂಡೇಷನ್ ಅಧ್ಯಕ್ಷ ಬಸವರಾಜ ಧನ್ನೂರ ಅವರು ಆರ್ಟ್ ಗ್ಯಾಲರಿಯ ಸ್ಥಾಪಕ ಸಿ.ಬಿ. ಸೋಮಶೆಟ್ಟಿ ಅವರಿಗೆ ದೇಣಿಗೆಯ ಚೆಕ್ ಹಸ್ತಾಂತರಿಸಿದರು. ಸಿ.ಬಿ. ಸೋಮಶೆಟ್ಟಿ ನಾಡಿನ ಖ್ಯಾತ ಚಿತ್ರಕಲಾವಿದರಲ್ಲಿ ಒಬ್ಬರಾಗಿದ್ದಾರೆ. ಬಸವಣ್ಣನವರ ಜನ್ಮದಿಂದ ಲಿಂಗೈಕ್ಯದವರೆಗಿನ ಪ್ರಮುಖ ಘಟನಾವಳಿಗಳ ಮೇಲೆ ಬೆಳಕು ಚೆಲ್ಲುವ ಚಿತ್ರಗಳನ್ನು ಬಿಡಿಸಿ, ಸ್ವಂತ ಹಣದಲ್ಲಿ ಆರ್ಟ್ ಗ್ಯಾಲರಿ ನಿರ್ಮಿಸಿರುವ ಅವರ ಕಾರ್ಯ ಶ್ರೇಷ್ಠವಾದದ್ದು ಎಂದು ಬಸವರಾಜ ಧನ್ನೂರ ಹೇಳಿದರು. ಬಸವಣ್ಣ, ಬಸವಾದಿ ಶರಣರ ಕುರಿತ ಅವರ ಅಧ್ಯಯನ, ಚಿತ್ರರಚನೆಗೆ ಕೊಟ್ಟ ಸಮಯ, ಶ್ರಮ, ಭಕ್ತಿ ಹಾಗೂ ನಿಷ್ಠೆ ಪ್ರಶಂಸನೀಯ ಎಂದು ತಿಳಿಸಿದರು. ಫೌಂಡೇಷನ್ ಬಸವಾದಿ ಶರಣರ ತತ್ವಗಳ ಪ್ರಚಾರ ಹಾಗೂ ಪ್ರಸಾರಕ್ಕೆ ಪ್ರೋತ್ಸಾಹ ನೀಡುತ್ತ ಬಂದಿದೆ. ಬಸವಣ್ಣನವರ ಜೀವನ ಚರಿತ್ರೆಯ ಚಿತ್ರಗಳ ಆರ್ಟ್ ಗ್ಯಾಲರಿ ನಿರ್ಮಿಸಿದ್ದಕ್ಕಾಗಿ ಸಿ.ಬಿ. ಸೋಮಶೆಟ್ಟಿ ಅವರಿಗೆ ದೇಣಿಗೆ ಕೊಡಲಾಗಿದೆ ಎಂದು ಹೇಳಿದರು.

## ಸಿದ್ಧಾರೂಢ ಮಠ: 10 ರಂದು ಗುರು ಪೂರ್ಣಿಮೆ



ಬೀದರ. ಜು. 07 : ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಜುಲೈ 10 ರಂದು ಗುರು ಪೂರ್ಣಿಮೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಬೆಳಿಗ್ಗೆ 6 ರಿಂದ 8 ರ ವರೆಗೆ ಸಿದ್ಧಾರೂಢ ಪ್ರತಿಮೆಗೆ ಮಹಾ ರುದ್ರಾಭಿಷೇಕ, ಬೆಳಿಗ್ಗೆ 9 ರಿಂದ 10 ರ ವರೆಗೆ ಶ್ರೀ ಗುರು ಸ್ತೋತ್ರ, ಭಜನೆ, ಬೆಳಿಗ್ಗೆ 10.30 ರಿಂದ ಶ್ರೀಗಳ ಪ್ರವಚನ, ನಂತರ ಮಠದ ಸಕಲ ಸಾಧಕ, ಸಾಧಕಿಯ-ರಿಂದ ಷೋಡಶೋಪಚಾರ ಮೂಲಕ ಶ್ರೀಗಳ ಪಾದಪೂಜೆ, ನಾಣ್ಯಗಳಿಂದ ತುಲಾಭಾರ, ಸುವರ್ಣ ಕಿರೀಟ ಧಾರಣೆ ಹಾಗೂ ಕನಕ ಪುಷ್ಪವೃಷ್ಟಿ ಜರುಗಲಿದೆ.

ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಜಿಲ್ಲೆ, ಮಹಾರಾಷ್ಟ್ರ, ಗೋವಾ, ತೆಲಂಗಾಣದ ಭಕ್ತರು ಪಾಲ್ಗೊಳ್ಳಲಿದ್ದಾರೆ.

ಜಿಲ್ಲೆಯ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಸಿದ್ಧಾರೂಢ ಮಠದ ಆಡಳಿತಾಧಿಕಾರಿ ಡಾ.ಹಾವಗಿರಾವ್ ಮೈಲಾರೆ ಕೋರಿದ್ದಾರೆ.

## ಬಸವತತ್ವ ಆಚರಣೆಯಿಂದ ಸುಖಿ ಸಮಾಜ:ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಜು.7:ಬಸವತತ್ವದ ಆಚರಣೆ ಸಹಜಾಚರಣೆ ಆಗಿದೆ.ಯಾವುದೇ ಆಡಂಬರ, ಶೋಷಣೆ, ಡಂಭಾಚಾರ, ಮೂಢನಂಬಿಕೆಗಳು ಬಸವತತ್ವದದಲ್ಲಿ ಇಲ್ಲ. ನಾವು ಬಾಹ್ಯ ಆಕರ್ಷಣೆ ಡಂಬಾಚಾರಕ್ಕೆ ಮರುಳಾಗದೆ ಬಸವತತ್ವದ ಸಹಜಾಚರಣೆಗೆ ಆದ್ಯತೆ ನೀಡಿದರೆ ಸುಖಿ ಸಮಾಜ ನಿರ್ಮಾಣವಾಗುತ್ತದೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗಪಟ್ಟದ್ದೇವರು ಹೇಳಿದರು.ಮಹಾರಾಷ್ಟ್ರ ರಾಜ್ಯದ ಜಾಲನಾ ಜಿಲ್ಲಾ ಕೇಂದ್ರದಲ್ಲಿ ಆಯೋಜಿಸಿದ್ದ ಗ್ರಂಥ ತುಲಾಭಾರ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.ಬಸವಾದಿ ಶರಣರು ನಮಗೆ ಸರಳ, ಸಹಜವಾದ ಧರ್ಮ ನೀಡಿದ್ದಾರೆ. ಧರ್ಮ ನಿಜಾಚರಣೆಯಲ್ಲಿ ಬರಬೇಕಾದರೆ ವಚನಗಳ ಅಧ್ಯಯನ ಮಾಡಬೇಕು. ಅದಕ್ಕಾಗಿಯೇ ಮನೆ ಮನೆಗೆ ವಚನ ಸಾಹಿತ್ಯ ತಲುಪಬೇಕೆಂಬ ಉದ್ದೇಶದಿಂದ ನಾವು ಮಹಾರಾಷ್ಟ್ರ ಬಸವ ಪರಿಷತ್ತ ಸ್ಥಾಪಿಸಿ, ಇಲ್ಲಿಯವರೆಗೆ 200 ಕ್ಕಿಂತಲೂ ಹೆಚ್ಚಿನ ಮರಾಠಿ ಪುಸ್ತಕಗಳು ಪ್ರಕಟಿಸಿದ್ದೇವೆ. ಈ ಗ್ರಂಥಗಳ ಲಕ್ಷಾಂತರ ಪ್ರತಿಗಳು ಮರಾಠಿ ಜನರಿಗೆ ತಲುಪಿವೆ. ಇಂದು ತಮ್ಮ ಅಮೃತ ಮಹೋತ್ಸವದ ನಿಮಿತ್ತ ವಚನ ಗ್ರಂಥಗಳ ತುಲಾಭಾರ ಮಾಡಿ ವಚನ ಗ್ರಂಥಗಳು ಮನೆಮನೆಗೆ ತಲುಪಿಸುವ ಕಾರ್ಯ ಮಾಡುತ್ತಿರುವುದು ಖುಷಿ ತಂದಿದೆ. ನಾವು ಇಲ್ಲಿಯವರೆಗೆ ತುಲಾಭಾರವನ್ನು ಮಾಡಿಕೊಳ್ಳಲು ಒಪ್ಪಲಿಲ್ಲ. ಆದರೆ ವಚನ ಸಾಹಿತ್ಯ ಮನೆ ಮನೆಗೆ ತಲುಪಲು ಇದೊಂದು ಮಾರ್ಗವಾಗಿದೆ ಎಂದು ಮಹಾರಾಷ್ಟ್ರದ ಸದ್ಭಕ್ತರ ಮುಂದೆ ಇದನ್ನು ಒಪ್ಪಿಕೊಂಡಿದ್ದೇವೆ ಎಂದು ತಿಳಿಸಿದರು.ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಸಾಹಿತಿ ಡಾ.ವಾಸುದೇವ ಮುಲಾಟೆ ಮಾತನಾಡಿ, ಬಸವಾದಿ ಶರಣರ ಚಿಂತನೆಗಳು ಪರಮ ಪೂಜ್ಯರು ತಾವು ಆಚರಣೆಯಲ್ಲಿ ತರುವುದರ ಜೊತೆಗೆ ಸಾಮಾನ್ಯ ಜನರಿಗೆ ತಲುಪಿಸುವ ಕಾರ್ಯ ಮಾಡುತ್ತಿರುವುದು ಅಭಿನಂದನೀಯ ಕಾರ್ಯವಾಗಿದೆ ಎಂದು ತಿಳಿಸಿದರು.ವಕೀಲ ಶಿವಾನಂದ ಹೈಬತಪುರೆ ಮಾತನಾಡಿದರು. ಸಾಹಿತಿ ರಾಜು ಜುಬರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಬಸವರಾಜ ಕೋರೆ ಸ್ವಾಗತಿಸಿದರು. ರಾಜೇಂದ್ರ ವಾಂಜೋಳೆ ನಿರೂಪಿಸಿದರು. ಹೇಮಾ ಸಾವರಗಾಂವಕರ ವಂದಿಸಿದರು.

# ಜಲಾಶಯ ಸಂಗ್ರಹವನ್ನು ಆಧರಿಸಿ ಹಿಂದೆ ಅನುಸರಿಸಿದ 14 ದಿನ ಚಾಲು ಹಾಗೂ 10 ದಿನ ಬಂದ್ ಪದ್ಧತಿಯನ್ನು ಅನುಸರಿಸಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 07- ಜಲಾಶಯಗಳಲ್ಲಿನ ಸಂಗ್ರಹವನ್ನು ಆಧರಿಸಿ ಈ ಹಿಂದೆ ಅನುಸರಿಸಿದ 14 ದಿನ ಚಾಲು ಹಾಗೂ 10 ದಿನ ಬಂದ್ ಪದ್ಧತಿಯನ್ನು ಅನುಸರಿಸುವಂತೆ ಅಬಕಾರಿ ಸಚಿವರು ಹಾಗೂ ಬಾಗಲಕೋಟ ಜಿಲ್ಲಾ ಉಸ್ತುವರಿ ಸಚಿವರು ಮತ್ತು ಕೃಷ್ಣಾ ಮೇಲ್ದಂಡೆ ಯೋಜನೆ ಸಭೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಆರ್.ಬಿ. ತಿಮ್ಮಾಪೂರ ಅವರ ಸಭೆಯಲ್ಲಿ ನಿರ್ಣಯವಾಗಿದೆ ಎಂದು ಭೀಮರಾಯನಗುಡಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಅಧೀಕ್ಷಕ ಅಭಿಯಂತರರು ತಿಪ್ಪಣ್ಣಗೌಡ ಎಸ್ ಅನ್ನದಾನಿ ಅವರು ಹೇಳಿದರು.

ಬೆಂಗಳೂರು ವಿಕಾಸ ಸೌದದಲ್ಲಿ 2025ರ ಜುಲೈ 1ರ ಮಂಗಳವಾರರಂದು ಇತ್ತೀಚಿನ ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶದ 2025-26ನೇ ಸಾಲಿನ ಮುಂಗಾರು ಹಂಗಾಮಿಗಾಗಿ ನೀರಾವರಿ ಸಲಹಾ ಸಮಿತಿ, ಕೃಷ್ಣಾ ಮೇಲ್ದಂಡೆ ಯೋಜನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲಾ ಅಧಿಕಾರಿ ಸದಸ್ಯರು ಹಾಗೂ ವಿಶೇಷ ಆಹ್ವಾನಿತರೊಂದಿಗೆ ಸುಧೀರ್ಘವಾಗಿ ಚರ್ಚಿಸಿದ ನಂತರ, ಎರಡೂ ಜಲಾಶಯಗಳಲ್ಲಿ ಮುಂಗಾರು ಹಂಗಾಮಿಗೆ ಅಗತ್ಯವಿರುವ ನೀರು ಸಂಗ್ರಹಣೆಯಾಗಿರುವುದರಿಂದ, ಕೃಷ್ಣಾ ಮೇಲ್ದಂಡೆ ಯೋಜನೆಯ ಎಲ್ಲಾ ಕಾಲುವೆಗಳಿಗೆ 2025ರ ಜುಲೈ 8 ರಿಂದಲೇ ನೀರು ಹರಿಸಲು ಹಾಗೂ ಒಳಹರಿವು, ಹೊರಹರಿವಿನ ಪ್ರಮಾಣಕ್ಕೆ ಸಮವಾಗಿರುವವರೆಗೆ ಸತತವಾಗಿ ಕಾಲುವೆ ಜಾಲಕ್ಕೆ ನೀರು ಹರಿಸಲಾಗುವುದು ಹಾಗೂ ಒಂದು ವೇಳೆ ಆಲಮಟ್ಟಿ ಆಣೆಕಟ್ಟಿನಲ್ಲಿ ಪೂರ್ಣ ಪ್ರಮಾಣದ ನೀರು ಭರ್ತಿ ಆಗದೇ ಇದ್ದ ಪಕ್ಷದಲ್ಲಿ ಜಲಾಶಯಗಳಲ್ಲಿನ ಸಂಗ್ರಹವನ್ನು ಆಧರಿಸಿ ಈ ಹಿಂದೆ ಅನುಸರಿಸಿದ 14 ದಿನ ಚಾಲು ಹಾಗೂ 10 ದಿನ ಬಂದ್ ಪದ್ಧತಿಯನ್ನು ಈ ಕೆಳಗಿನ ವೇಳಾ ಪಟ್ಟಿಯಂತೆ ಅನುಸರಿಸಲು ಸರ್ವಾನುಮತದಿಂದ ತೀರ್ಮಾನಿಸಲಾಗಿರುತ್ತದೆ ಎಂದರು.

ಕಾಲುವೆ ಚಾಲೂ ಇರುವುದು 14 ದಿನ ವಾರ ಬಂದಿಯಂತೆ ರಚನೆ, 2025ರ ಜುಲೈ 8 ರಿಂದ ಜುಲೈ 21ರ ವರೆಗೆ, 2025ರ ಆಗಸ್ಟ್ 1 ರಿಂದ ಆಗಸ್ಟ್ 14ರ ವರೆಗೆ, 2025ರ ಆಗಸ್ಟ್ 25 ರಿಂದ ಸೆಪ್ಟೆಂಬರ್ 7ರ ವರೆಗೆ, 2025ರ ಸೆಪ್ಟೆಂಬರ್ 18 ರಿಂದ ಅಕ್ಟೋಬರ್ 1ರ ವರೆಗೆ, 2025ರ ಅಕ್ಟೋಬರ್ 12 ರಿಂದ ಅಕ್ಟೋಬರ್ 25ರ ವರೆಗೆ ಒಟ್ಟು 70 ದಿನಗಳು ಕಾಲುವೆ ಚಾಲೂ ಇರುವ ದಿನಾಂಕ ಪ್ರಕಟಿಸಿದೆ ಎಂದು ತಿಳಿಸಿದರು.

ಕಾಲುವೆ ಬಂದ ಇರುವುದು 10 ದಿನ ವಾರ ಬಂದಿಯಂತೆ ರಚನೆ 2025ರ ಜುಲೈ 22 ರಿಂದ ಜುಲೈ 31ರ ವರೆಗೆ, 2025ರ ಆಗಸ್ಟ್ 15 ರಿಂದ ಆಗಸ್ಟ್ 24ರ ವರೆಗೆ, 2025ರ ಸೆಪ್ಟೆಂಬರ್ 8 ರಿಂದ ಸೆಪ್ಟೆಂಬರ್ 17ರ ವರೆಗೆ, 2025ರ ಅಕ್ಟೋಬರ್ 2 ರಿಂದ ಅಕ್ಟೋಬರ್ 11ರ ವರೆಗೆ, 2025ರ ಅಕ್ಟೋಬರ್ 26 ರಿಂದ ನವೆಂಬರ್ 4ರ ವರೆಗೆ ಒಟ್ಟು 50 ದಿನಗಳು ಕಾಲುವೆ ಬಂದ ಇರುವ ದಿನಾಂಕ ಪ್ರಕಟಿಸಿದೆ ಎಂದು ಹೇಳಿದರು.

ಮೇಲಿನ ತೀರ್ಮಾನದಂತೆ ಕೃಷ್ಣಾ ಮೇಲ್ದಂಡೆ ಯೋಜನೆ, ಕೃಭಾಜನಿನಿ, ಜೆಬಿಸಿ ವೃತ್ತ, ಭೀಮರಾಯನಗುಡಿ ಕಛೇರಿ ಅಧೀನದಲ್ಲಿ ಬರುವ ಶಹಾಪೂರ ಶಾಖಾ ಕಾಲುವೆ, ಜೇವರ್ಗಿ ಶಾಖಾ ಕಾಲುವೆ ಮತ್ತು ಮುಡಬಾಳ ಶಾಖಾ ಕಾಲುವೆಯ ಅಚ್ಚುಕಟ್ಟು ಪ್ರದೇಶದ ಜಾಲದಡಿ 2025-26 ನೇ ಸಾಲಿನ ಮುಂಗಾರು ಹಂಗಾಮಿಗಾಗಿ 2025ರ ಜುಲೈ 8 ರಿಂದ ಕಾಲುವೆಗಳಲ್ಲಿ ನೀರು ಹರಿಸಲಾಗುವುದು ಎಂದರು.

ಕಾಲುವೆ ಜಾಲದ ಗೇಟುಗಳನ್ನು ಹಾನಿ ಮಾಡುವುದು, ಎಸ್ಕೇಪ್‌ಗಳ ಮೂಲಕ ಹಳ್ಳಕ್ಕೆ ನೀರು ಹರಿಸುವುದು, ಸೈಫನ್‌ಗಳ ಮೂಲಕ ಮಣ್ಣಿನ ಏರಿಯಲ್ಲಿ ನೀರನ್ನು ಎತ್ತಿಕೊಳ್ಳುವುದು, ಕಾಲುವೆ ಜಾಲದಲ್ಲಿ ಪಂಪುಗಳ ಮೂಲಕ ನೀರನ್ನು ಎತ್ತುವುದನ್ನು ನಿರ್ಬಂಧಿಸಲಾಗಿದೆ. ಈ ಪರಿಸ್ಥಿತಿ ಕಂಡುಬಂದರೆ, ಸಂಬಂಧಿಸಿದವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು.

ರೈತ ಬಾಂಧವರು ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶದಲ್ಲಿ ಲಘು ನೀರಾವರಿ ಬೆಳೆಗಳನ್ನು ಮಾತ್ರ ಬೆಳೆಯಲು ವಿನಂತಿಸುತ್ತಾ ನೀರಿನ ಬಳಕೆಯಲ್ಲಿ ಮಿತವ್ಯಯ ಸಾಧಿಸುವ ದಿಶೆಯಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳೊಂದಿಗೆ ಸಹಕಾರ ನೀಡಬೇಕು. "ಜೀವ ಜಲ ಅತೀ ಅಮೂಲ್ಯ ಅದನ್ನು ಪೋಲು ಮಾಡಬೇಡಿ ಹಿತವಾಗಿ ಮಿತವಾಗಿ ಬಳಸಿ" ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮಾಡಳಿತ ಅಧಿಕಾರಿಗಳಿಗೆ ಲ್ಯಾಪ್ ಟ್ಯಾಪ್ ವಿತರಣೆ

# ಶಿಘ್ರದಲ್ಲಿ ಕಂದಾಯ ದಾಖಲಾತಿಗಳ ಡಿಜಟಲೀಕರಣ ಪೂರ್ಣ-ಸಚಿವ ದರ್ಶನಾಪುರ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಕಂದಾಯ ಇಲಾಖೆ ಸಮಸ್ಯೆಗಳಿಂದ ಅನೇಕ ತೊಂದರೆಗಳು ಉಂಟಾಗಿ ಜನರಿಗೆ ದಾಖಲಾತಿಗಳನ್ನು ಒದಗಿಸುವಲ್ಲಿ ದಿನಮಾನಗಳು ಕಳೆಯುತ್ತಿದ್ದವು ಇಂದು ಕಂದಾಯ ಇಲಾಖೆ ಹಿಂದಿನ ಸಮಗ್ರ ದಾಖಲಾತಿಗಳನ್ನು ಡಿಜಟಲೀಕರಣ ಮಾಡುವದರ ಮುಖಾಂತರ ರೈತರಿಗೆ ಜನ ಸಾಮಾನ್ಯರಿಗೆ ಅತ್ಯಂತ ಅನೂಕೂಲವಾಗಲ್ಲಿದೆ, ಕಂದಾಯ ದಾಖಲಾತಿಗಳ ಡಿಜಟಲೀಕರಣ ಶಿಘ್ರದಲ್ಲೆ ಪೂರ್ಣಗೊಳ್ಳಲ್ಲಿದೆ ಎಂದು ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ತಿಳಿಸಿದರು, ಅವರು ನಗರದ ತಹಿಸಲ್ದಾರ ಕಚೇರಿಯಲ್ಲಿ ಗ್ರಾಮಾಡಳಿತಾಧಿಕಾರಿಗಳಿಗೆ ಲ್ಯಾಪ್ ಟ್ಯಾಪ್ ವಿತರಣೆ ಮಾಡಿ ಮಾತನಾಡಿದರು, ಈಗಾಗಲೆ ಇ-ಪಾವತಿಗೆ ಚಾಲನೆ ನೀಡಿದ್ದು ಕಂದಾಯ ಇಲಾಖೆ ಇಆಡಳಿತದಿಂದ ಮುಂದುವರೆದಿದೆ ಎಂದರು, ಪೇಪರ ಲೆಸ್ ಆಡಳಿತ ಮಾಡುವ ಸದುದ್ದೇಶದಿಂದ ಇಂದು ಪ್ರತಿಯೊಬ್ಬ ಗ್ರಾಮಾಡಳಿತಾಧಿಕಾರಿಗಳು ತಮ್ಮ ಲ್ಯಾಪ್ ಟ್ಯಾಪ್‌ನಲ್ಲಿ ಕಂದಾಯ ಪ್ರಮುಖ ದಾಖಲೆಗಳನ್ನು ಆಯಾ ಹೊಬಳ್ಳಿ ನಾಡ ಕಚೇರಿಗಳಿಗನುಗುಣವಾಗಿ ಸ್ಕಾನ್ ಮಾಡಿಕೊಂಡು ಜನ ಸಾಮಾನ್ಯರಿಗೆ ಅನೂಕೂಕರವಾಗಿರುವ ಕರ್ತವ್ಯದಲ್ಲಿ ನಿರ್ವಹಣೆ ಮಾಡಬೇಕು ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ ಒಟ್ಟು 91 ಗ್ರಾಮಾಡಳಿತಾಧಿಕಾರಿಗಳಿಗೆ ಲ್ಯಾಪ್ ಟ್ಯಾಪ್ ಹಂಚಿಕೆ ಮಾಡಲಾಗುತ್ತಿದ್ದು ಶಹಾಪುರ ತಾಲುಕಿನ ಒಟ್ಟು 39 ಕಂದಾಯ ಗ್ರಾಮಾಡಳಿತಾಧಿಕಾರಿಗಳ ಪೈಕಿ ಇಂದು 21 ಜನ ಅಧಿಕಾರಿಗಳಿಗೆ ಈ ಲ್ಯಾಪ್ ಟ್ಯಾಪ್ ನೀಡಲಾಗುತ್ತಿದೆ ಇನ್ನೂ ಬಾಕಿ ಅಧಿಕಾರಿಗಳಿಗೆ ಆನಂತರದಲ್ಲಿ ಹಂಚಿಕೆ ಮಾಡಲಾಗುತ್ತದೆ ಎಂದು ಸಚಿವ ದರ್ಶನಾಪುರವರು ವಿವರಿಸಿದರು, 56 ಸಾವಿರ ದಾಖಲಾತಿಗಳಲ್ಲಿ ಶೇ25ರಷ್ಟು ಮಾತ್ರ ಬಾಕಿ ಉಳಿದಿವೆ, ಎಂದರು, ಜಿಲ್ಲಾಧಿಕಾರಿಗಳಾದ ಡಾ. ಪಿ. ಶುಶೀಲಾರವರು ಮಾತನಾಡಿ, ರಾಜ್ಯದಲ್ಲೆ ಯಾದಗಿರಿ ಜಿಲ್ಲೆ ಡಿಜಟಲೀಕರಣದಲ್ಲಿ ಪ್ರಥಮವಾಗಿದ್ದು ಶಿಘ್ರವಾಗಿ ಪೂರ್ಣವಾದಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಡಿಜಟಲೀಕರಣ ಜಿಲ್ಲೆ ಎಂದು ಘೋಷಣೆ ಮಾಡಲು ಕಂದಾಯ ಇಲಾಖೆಯ ಮೇಲಾಧಿಕಾರಿಗಳು ಸೂಚನೆ ನೀಡಿದ್ದಾರೆ, ಎಂದರು, ಸಾಹಾಯಕ ಆಯುಕ್ತರಾದ ಅಂಪಣ್ಣ ಸಜ್ಜನ ರವರು ಹಾಜರಿದ್ದರು, ತಹಿಸಲ್ದಾರ ಉಮಾಕಾಂತ ಹಳ್ಳೆಯವರು ಮಾತನಾಡಿ, 9 ಸಾವಿರ ರೈತರು ಮೃತಪಟ್ಟಿದ್ದಾರೆ ಎಂದು ಯಥಾಸ್ಥಿತಿಯಲ್ಲಿ ದಾಖಲೆಗಳು ಉಳಿದುಕೊಂಡಿವೆ ಈ ಕುರಿತು ಗ್ರಾಮಾಡಳಿತ ಅಧಿಕಾರಿಗಳು ಮೃತಗೊಂಡ ರೈತರನ ಭೂದಾಖಲೆಗಳಂತೆ ಮನೆಗೆ ತೆರಳಿ ಪಂಚನಾಮೆ ಮಾಡಿ ಅವರ ಸಂಭಂಧಿಕರಿಂದ ಅಭಿಪ್ರಾಯ ಸಂಗ್ರಹ ಮತ್ತು ಹಕ್ಕು ಬದಲಾವಣೆ ಮಾಡಲಾಗುತ್ತದೆ ಎಂದು ಅವರು ಹೆಳಿದರು, ಈ ಸಮಯದಲ್ಲಿ ಕಂದಾಯ ಇಲಾಖೆಯ ಶಿರಸ್ತೆದಾರರು ಅಧಿಕಾರಿಗಳು ಸಿಬ್ಬಂದಿಯವರು ಹಾಜರಿದ್ದರು.

# ಶಿಬಿರಾರ್ಥಿಗಳಿಗೆ ಹದಿಹರೆಯದ ಯುವಕರ ಸಮಸ್ಯೆಗಳು ಕುರಿತು ಮಾಹಿತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ, 7-ಜುಲೈ 2025ರಂದು ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್. ವಿಶೇಷ ವಾರ್ಷಿಕ ಶಿಬಿರದ ಆರನೇ ದಿನದ ಅಂಗವಾಗಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಬ್ರಿಮ್ಸ್ ಆರೋಗ್ಯಾಧಿಕಾರಿಗಳಾದ ಡಾ. ಶೈಲಜಾ ಚೆನ್ನಶೆಟ್ಟಿಯವರು ಮಾತನಾಡುತ್ತಾ ಇಂದಿನ ಯುವಕರು ಮಾದಕ ವ್ಯಸನಗಳಿಗೆ ದಾಸರಾಗಿ ತಮ್ಮ ಆರೋಗ್ಯದ ಜೊತೆಗೆ ಸಮಯ ಮತ್ತು ಪಾಲಕರ ಹಣವನ್ನು ವ್ಯರ್ಥವಾಗಿ ಪೋಲು ಮಾಡುತ್ತಿದ್ದಾರೆ. ಮಧ್ಯಪಾನ, ಧೂಮಪಾನ, ಡ್ರಗ್ಸ್ ಚಟಗಳಿಗೆ ಸಂಪೂರ್ಣವಾಗಿ ಇಳಿದು ತಮ್ಮ ಜೀವನ ಹಾಳು ಮಾಡಿಕೊಂಡು ತಮ್ಮ ಗುರಿಯನ್ನು ಮರೆಯುತ್ತಿದ್ದಾರೆ. ತಂದೆ, ತಾಯಿಯ ಆಕಾಂಕ್ಷೆಯಂತೆ ಅಧ್ಯಯನದಲ್ಲಿ ತೊಡಗಿ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿ ಪಡೆದು ದೇಶದ ಅತೀ ಉನ್ನತ ಹುದ್ದೆಗಳಾದ ಐ.ಎ.ಎಸ್, ಐ.ಪಿ.ಎಸ್. ಐ.ಆರ್.ಎಸ್., ಐ.ಎಫ್.ಎಸ್. ಹಾಗೂ ವಿದೇಶದಲ್ಲಿರುವ ರಾಯಭಾರಿ ಕಛೇರಿಗಳಲ್ಲಿ ಸಹ ತಾವು ಉತ್ತಮ ದರ್ಜೆಯ ಹುದ್ದೆ ಅಲಂಕರಿಸಿ ಸಮಾಜದ ಹಾಗೂ ಪಾಲಕರ ಕೀರ್ತಿಯನ್ನು ಆಕಾಶದೆತ್ತರಕ್ಕೆ ಕೊಂಡೊಯ್ಯಬೇಕೆಂದು ಶಿಬಿರಾರ್ಥಿಗಳಿಗೆ ಪ್ರೇರೆಪಿಸಿದರು.

ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ಹೊಂದಿದ ಡಾ. ಶಿವಲೀಲಾ ವೀರಯ್ಯಾ ಅವರು ಮಾತನಾಡುತ್ತಾ ವಿಶೇಷ ಚೇತನ ಮಕ್ಕಳ ದೇವರ ಮಕ್ಕಳು ಅವರನ್ನು ಕೀಳುದೃಷ್ಟಿಯಿಂದ ನೋಡದೆ ಉತ್ತಮ ದರ್ಜೆಯಲ್ಲಿ ಅವರಿಗೆ ಲಾಲನೆ ಪಾಲನೆ ಮಾಡಿ ಅವರನ್ನು ಸಹ ಸಮಾಜದ ಕೇಂದ್ರ ಬಿಂದುವಿಗೆ ತರಬೇಕು ತಂದೆ, ತಾಯಿ ದೇವರೆಂದು ಗುರು ಹಿರಿಯರಿಗೆ ಗೌರವ ಕೊಡಬೇಕೆಂದು ಶಿಬಿರಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲರಡ್ಡಿಯವರು ಮಾತನಾಡುತ್ತಾ ಇಂದಿನ ಆಧುನಿಕ ಯುಗದಲ್ಲಿ ಯುವಜನಾಂಗ ಅಧ್ಯಯನಕ್ಕೆ ಹೆಚ್ಚು ಒತ್ತುಕೊಡದೇ ಅನಾವಶ್ಯಕವಾಗಿ ಅವರು ಮೋಬೈಲನಲ್ಲಿ ಬರುವ ಆಟಗಳಿಗೆ ದಾಸರಾಗಿ ಖಿನ್ನತೆಗೆ ಒಳಗಾಗುತ್ತಿದ್ದಾರೆ. ಅವರನ್ನು ಹೊರತರುವುದು ಆರೋಗ್ಯಾಧಿಕಾರಿಗಳ ಸಂಪೂರ್ಣ ಕರ್ತವ್ಯವಾಗಿದೆ ಈ ಹದಿಹರೆಯದ ಯುವಕರಲ್ಲಿ ಮಾನಸಿಕವಾಗಿ ಸದೃಢಗೊಳ್ಳಲು ಶಾಲಾ, ಕಾಲೇಜುಗಳಲ್ಲಿ ನೈತಿ-ಕ ಪಾಠದ ಅವಶ್ಯಕತೆ ಇದೆ, ನಾವು ಇನ್ನೋಬ್ಬರನ್ನು ಹೇಗೆ ಗೌರವಿಸಬೇಕು ಗುರು ಹಿರಿಯರನ್ನು ಆದರದಿಂದ ನೋಡಬೇಕು ಹಾಗೂ ಯಾವ ಚಟಗಳಿಗೆ ಒಳಗಾಗದೆ ಆರೋಗ್ಯವಂತರಾದಾಗ ಬಾಪೂಜೀ ಕಂಡ ರಾಮರಾಜ್ಯ ಹಾಗೂ ಮಾತ್ರ ಸದೃಢ ಸಮಾಜ ನಿರ್ಮಾಣಗೊಳ್ಳಲು ಸಾಧ್ಯವಾಗುತ್ತದೆ ಎಂದು ಶಿಬಿರಾರ್ಥಿಗಳನ್ನು ಉದ್ದೇಶಿಸಿ ಕಿವಿ ಮಾತು ಹೇಳಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಗೌರವ ಉಪಸ್ಥಿತಿಯನ್ನು ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆ ಮತ್ತು ಎನ್.ಎಸ್.ಎಸ್. 'ಅ' ಘಟಕದ ಸಂಯೋಜನಾಧಿಕಾರಿಗಳಾದ ಡಾ. ದೀಪಾ ರಾಗ, ಹಾಗೂ 'ಬ' ಘಟಕ ಸಂಯೋಜನಾಧಿಕಾರಿಗಳಾದ ಶ್ರೀ ಬಸವರಾಜ ಬಿರಾದಾರ ಉಪಸ್ಥಿತರಿದ್ದರು.

ಕಾರ್ಯಕ್ರಮ ಮೊದಲಿಗೆ ಸ್ವಾಗತವನ್ನು ಪ್ರಾಣಿಶಾಸ್ತ್ರ ವಿಭಾಗದ ಉಪನ್ಯಾಸಕರ ಶ್ರೀಮತಿ ಪೂಜಾ ಮಂಗಲಗಿ ನಡೆಸಿಕೊಟ್ಟರೆ, ಕಾರ್ಯಕ್ರಮದ ನಿರೂಪಣೆಯನ್ನು ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ಶ್ರೀ ಸಂದೀಪ ವನ್ನಾಳೆ ಮಾಡಿದರೆ ಕಾರ್ಯಕ್ರಮವನ್ನು ಸಸ್ಯಶಾಸ್ತ್ರ ವಿಭಾಗದ ಶ್ರೀಮತಿ ನಾಗೇಶ್ವರಿ ಕೆ. ಸ್ವಾಮಿ ವಂದಿಸಿದರು, ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. ಶಿಬಿರಾರ್ಥಿಗಳು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಯುವ ಜನತೆ, ಮಕ್ಕಳನ್ನು ಮಾದಕ ವಸ್ತುಗಳಿಂದ ದೂರವಿಡಬೇಕು



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಜು.7:ಯುವ ಜನತೆ ಹಾಗೂ ಮಕ್ಕಳನ್ನು ಮಾದಕ ವಸ್ತುಗಳ ಸೇವನೆಯಿಂದ ದೂರವಿಡಬೇಕು. ಅವರ ಶಕ್ತಿಯನ್ನು ದೇಶಕ್ಕೆ ಉಪಯೋಗವಾಗುವಂತೆ ನೋಡಿಕೊಳ್ಳಬೇಕು. ಮಕ್ಕಳು ಯಾವುದೇ ದುಶ್ಚಟಗಳಿಗೆ ಬಲಿಯಾಗಬಾರದು ಎಂದು ಪ್ರೌಢ ಶಾಲೆಯ ಸಮಾಜ ವಿಜ್ಞಾನ ಶಿಕ್ಷಕ ಗೂಳಪ್ಪ.ಎಸ್.ಮಲ್ಹಾರ ಅಭಿಪ್ರಾಯಪಟ್ಟರು.

ಪಟ್ಟಣದ ಮಲ್ಹಾರ ಕಾರಡ್ಡಿ ಬಸವಂತರಾಯ ಮತ್ತು ಸಿದ್ದಪ್ಪ ಸ್ಮಾರಕ ವಿದ್ಯಾ ವರ್ಧಕ ಪದವಿ ಪೂರ್ವ ಕಾಲೇಜಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ವತಿಯಿಂದ ಹಮ್ಮಿಕೊಂಡ ಅಂತರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದರು. ವಿದ್ಯಾರ್ಥಿಗಳ ಜೀವನ ಅಮೂಲ್ಯವಾದದ್ದು ಇದನ್ನು ಪೋಲು ಮಾಡಿಕೊಳ್ಳದೆ ಉತ್ತಮವಾದ ಜೀವನವನ್ನು ರೂಪಿಸಿಕೊಳ್ಳಬೇಕು. ತಂದೆ ತಾಯಿಗಳಿಗೆ ಒಳ್ಳೆಯ ಮಕ್ಕಳಾಗಿ ಸಮಾಜಕ್ಕೆ ಒಳ್ಳೆಯ ಪ್ರಜೆಗಳಾಗಿ ಬದುಕಬೇಕು. ಮಾದಕ ವಸ್ತುಗಳಿಗೆ ದಾಸರಾಗಿ ಉದ್ಧಾರ ಆದರವರೂ ಇತಿಹಾಸದಲ್ಲೇ ಇಲ್ಲಾ. 1987 ಡಿಸೆಂಬರ್ 7ರಂದು ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಚರ್ಚೆ ಮಾಡಿ ಜೂನ್ 26ರಂದು ವಿಶ್ವ ಮಾದಕ ವಸ್ತುಗಳ ವಿರೋಧಿ ದಿನವನ್ನು ಆಚರಿಸುವುದಾಗಿ ತೀರ್ಮಾನಿಸಲಾಯಿತು. ಇದರ ಮಹತ್ವ ತಿಳಿದು ಜೀವನ ಮಾಡಿದರೆ ಆಚರಣೆಯ ಮಹತ್ವ ಹೆಚ್ಚಾಗುತ್ತದೆ ಎಂದು ಹೇಳಿದರು.

ಮುಖ್ಯಗುರು ಲಿಂಗಾರೆಡ್ಡಿ ನಾಯಕ ಉದ್ಘಾಟಿಸಿದರು. ಪ್ರಾಂಶುಪಾಲ ಜಿ.ಎಂ.ಗುರುಪ್ರಸಾದ ಅಧ್ಯಕ್ಷತೆ ವಹಿಸಿದ್ದರು. ಡಿ.ಎಲ್.ಇಡಿ ಕಾಲೇಜಿನ ಪ್ರಾಂಶುಪಾಲ ಕರಬಸಯ್ಯ ದಂಡಿಗಿಮಠ, ಮೇಲ್ವಿಚಾರಕರಾದ ರಂಗಮ್ಮ, ಸೇವಾ ಪ್ರತಿನಿಧಿ ಪಾರ್ವತಿ, ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು. ಉಪನ್ಯಾಸಕ ಚಂದ್ರಶೇಖರ ದೊಣ್ಣೆಗೌಡ ಸ್ವಾಗತಿಸಿದರು. ಕೃಷಿ ಮೇಲ್ವಿಚಾರಕ ಶರಣು ನಿರೂಪಿಸಿದರು.

# ಧರ್ಮಸ್ಥಳ ಸಂಸ್ಥೆ ರಾಮ ರಾಜ್ಯದ ಕನಸು ನನಸು ಮಾಡುತ್ತಿದೆ: ಪೂಜಾರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:- ಶ್ರೀ ಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ರಾಮ ರಾಜ್ಯದ ಕನಸು ಅವರ ಸಂಸ್ಥೆಯ ಮುಖಾಂತರ ನನಸು ಮಾಡುತ್ತಿದ್ದಾರೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಕಲ್ಬುರ್ಗಿ ಪ್ರಾದೇಶಿಕ ಕಚೇರಿಯ ನಿರ್ದೇಶಕ ದಿನೇಶ್ ಪೂಜಾರಿ ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತ ತಿಳಿಸಿದರು. ಈ ಸಂಸ್ಥೆಯ ಮುಖಾಂತರ ಸಮಾಜ ಮುಖಿ ಕಾರ್ಯಕ್ರಮ ಹಾಕಿಕೊಂಡು ಗ್ರಾಮಗಳ ಅಭಿವೃದ್ಧಿಗೆ ಹಗಲಿರಳು ಶ್ರಮಿಸುತ್ತಿವೆ ಎಂದರು. ಸಂಸ್ಥೆಯ ಮುಖಾಂತರ ಪರಿಸರ ಸಂರಕ್ಷಣೆಗೆ ಆದ್ಯತೆ, ಮದ್ಯವರ್ಜನ ಶಿಬಿರಗಳ ಮುಖಾಂತರ ಗ್ರಾಮಗಳಲ್ಲಿ ಕುಡಿತ ಚಟವನ್ನು ಬಿಡಿಸಲಾಗಿದೆ ಎಂದರು. ಸ್ವಸಹಾಯ ಸಂಘಗಳ ಮುಖಾಂತರ ಸಾಲ ಸೌಲಭ್ಯ ಸೇರಿದಂತೆ ಬಡ ಜನರ ಆರ್ಥಿಕ ಮಟ್ಟ ಸುಧಾರಿಸಿ ಸ್ವಾಲಂಬಿಗಳಾಗಿ ಬದುಕಲು ಸಂಸ್ಥೆ ಸಹಾಯ ಮಾಡುತ್ತಿದೆ ಎಂದರು. ಜಿಲ್ಲಾ ಜನ ಜಾಗೃತಿ ವೇದಿಕೆ ಅಧ್ಯಕ್ಷ ವಿರೋಪಕ್ಷಗಾದಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಯೋಜನಾನಿರ್ದೇಶಕ ಮುರಳಿಧರ್ ಪ್ರಾಸ್ತಾವಿಕವಾಗಿ ಮಾತನಾಡಿ, 2024-25 ನೇ ಸಾಲಿನ ಜನ ಜಾಗೃತಿ ವೇದಿಕೆ ಕಾರ್ಯಕ್ರಮದ ವರದಿ ವಿವರಿಸಿದರು. ಈ ಸಂದರ್ಭದಲ್ಲಿ ಹುಮನಾಬಾದ ತಾಲೂಕಿನ ಯೋಜನಾಧಿಕಾರಿ ವೀರೇಶ್, ರವೀಂದ್ರ, ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಯೋಜನಾಧಿಕಾರಿಗಳು ಹಾಗೂ ಜನ ಜಾಗೃತಿ ವೇದಿಕೆ ಸದಸ್ಯರು ಉಪಸ್ಥಿತರಿದ್ದರು. ಹೊಸದಾಗಿ ನೇಮಕಗೊಂಡಿರುವ ಹುಮನಾಬಾದ ತಾಲೂಕಿನ ಜನ ಜಾಗೃತಿ ವೇದಿಕೆಗೆ ನೇಮಕಗೊಂಡಿರುವ ಸಮಾಜ ಕಾರ್ಯಕರ್ತರು, ಹಿರಿಯ ಪತ್ರಕರ್ತರು, ಪರಿಸರವಾದಿ ಶೈಲೇಂದ್ರ ಕಾವಡಿ ಅವರಿಗೆ ಹೂ ಗುಚ್ಛ ನೀಡಿ ಸ್ವಾಗತಿಸಿಕೊಂಡರು. ಪ್ರಾದೇಶಿಕ ಕಚೇರಿಯ ನಿರ್ದೇಶಕರಾದ ದಿನೇಶ್ ಪೂಜಾರಿ ಅವರಿಗೆ ಶೈಲೇಂದ್ರ ಕಾವಡಿ ನೇತೃತ್ವದಲ್ಲಿ ಸಸಿ ಕೊಟ್ಟು ಸನ್ಮಾನಿಸಲಾಯಿತ್ತು. ಈ ಸಂದರ್ಭದಲ್ಲಿ ಚಿಟಗುಪ್ಪ ಪಟ್ಟಣದ ಸಮಾಜ ಕಾರ್ಯಕರ್ತ, ಶಿಕ್ಷಣ, ಮಕ್ಕಳ, ಪರಿಸರ ಪ್ರೇಮಿ ಹಾಗೂ ಜಿಲ್ಲಾ ಜನ ಜಾಗೃತಿ ವೇದಿಕೆ ಸದಸ್ಯ ಮಹಮ್ಮದ್ ಅಸ್ಲಾಂಮಿಯಾ ಉಪಸ್ಥಿತರಿದ್ದರು.

# ಅಲೆಮಾರಿ ನಿಗಮದ ಅಧ್ಯಕ್ಷೆ ಪಲ್ಲವಿ ವಜಾಗೊಳಿಸಲು ಒತ್ತಾಯ-ಸಿಎಂಗೆ ಮನವಿ ಸಲ್ಲಿಸಿದ ಚನ್ನದಾಸರ ಮಹಾಸಭಾ



ಬಸವಕಲ್ಯಾಣ

ಯಾದಗಿರಿ, ಜುಲೈ 7:ಕರ್ನಾಟಕ ರಾಜ್ಯ ಪ.ಜಾತಿ, ಪ.ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ ಅವರು ಅಲೆಮಾರಿ ಸಮುದಾಯದ ವಿರುದ್ಧ ನೀಡಿರುವ ವಿವಾದಿತ ಹೇಳಿಕೆ ಹಾಗೂ ದೂರುಗಳನ್ನು ಹಿಂಪಡೆದು ಅವರನ್ನು ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಬೇಕೆಂದು ಅಖಿಲ ಕರ್ನಾಟಕ ಚನ್ನದಾಸರ ಮಹಾಸಭಾ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂಬಂಧ ಅಧ್ಯಕ್ಷೆಯಾದ ಪಲ್ಲವಿ ಅವರು ಮಾಜಿ ಸಚಿವ ಹೆಚ್. ಆಂಜನೇಯ ನೇತೃತ್ವದಲ್ಲಿ ನಡೆದ ಸಭೆಗೆ ಬಂದು ಗೊಂದಲ ಸೃಷ್ಟಿಸಿದ ಕುರಿತು ಆರೋಪಿಸಲಾಗಿದೆ. ಸಹಜ ಸಂವಾದದ ಬದಲು ಅವಾಚ್ಯ ಶಬ್ದ ಬಳಕೆ ಹಾಗೂ ಅನೇಕ ಅಲೆಮಾರಿ ಸಮುದಾಯದ ಮುಖಂಡರ ವಿರುದ್ಧ ಸುಳ್ಳು ದೂರುಗಳನ್ನು ದಾಖಲಿಸಿರುವುದನ್ನು ಸಂಘ ಖಂಡಿಸಿದೆ.

ಪಲ್ಲವಿ ಅವರು ಅಧ್ಯಕ್ಷರಾಗಿದ ನಂತರ ಕೀಳು ಮಟ್ಟದ ಅಧಿಕಾರ ಚಲಾಯಿಸುತ್ತಿದ್ದು, ಜಾತಿಗಳ ಮಧ್ಯೆ ಭಿನ್ನತೆ ಉಂಟುಮಾಡುವಂತ ನಡವಳಿಕೆಯನ್ನು ತೋರಿರುವುದಾಗಿ ಆರೋಪಿಸಲಾಗಿದೆ. ತಮ್ಮ ಕುರಮಾ, ಕೊರಚ ಸಮುದಾಯದವರಿಗೆ ಮಾತ್ರ ಒಲವು ತೋರಿ ಇತರ ಅಲೆಮಾರಿ ಜಾತಿಗಳನ್ನು ಹಿಮ್ಮೆಟ್ಟಿಸುತ್ತಿರುವುದಾಗಿ ದೂರಿದ್ದಾರೆ.


ಈ ಕುರಿತು ತ್ವರಿತ ಕ್ರಮ ಕೈಗೊಳ್ಳದಿದ್ದರೆ ರಾಜ್ಯದ 49 ಅಲೆಮಾರಿ ಸಮುದಾಯದವರು ಬೆಂಗಳೂರು ರಾಜಧಾನಿಯಲ್ಲಿ ಬೃಹತ್ ಧರಣಿ ನಡೆಸಲಿದ್ದಾರೆ ಎಂದು ರಾಜ್ಯ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹೊಸಮನಿ ಎಚ್ಚರಿಸಿದರು.

ಈ ವೇಳೆ ವೆಂಕೋಬ ಕಟ್ಟಿಮನಿ, ರವಿಕುಮಾರ ದೇವರಮನಿ, ಶಂಕರ ಶಾಸ್ತ್ರಿ, ಮಾರೆಪ್ಪ ವಿಭುತಿ, ಖಂಡಪ್ಪ ಎಂಬಲಿಗೇರ, ಮಹಾದೇವ ಸೀತಾರಿ, ಅಶೋಕ ಹುವಿನಮನಿ ಮತ್ತಿತರರು ಉಪಸ್ಥಿತರಿದ್ದರು.



ಬಸವಕಲ್ಯಾಣ :-ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ತಾಲೂಕಿನ ರಾಜೇಶ್ವರ್ ಗ್ರಾಮದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ ಅವರಿಗೆ ಎಂ ಲ್ಸಿ ಭೀಮರಾವ್ ಪಾಟೀಲರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಓಂ ಪ್ರಕಾಶ್ ಅಗಡಿ ಹಾಗೂ ವೀರೇಶ್ ತೂಗಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಹದಗೆಟ್ಟ ರಸ್ತೆ ಅಭಿವೃದ್ಧಿ ಯಾವಾಗ.?



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಜು 7-ಇಲ್ಲಿನ ಸಸ್ತಾಪುರ ಬಂಗ್ಲಾದಿಂದ ಕೋಟೆಯ ವರೆಗೆ ಹಾಗೂ ಬಸ ನಿಲ್ದಾಣ-ಕ್ಕೆ ಹೊಗುವ ರಸ್ತೆ ಹದಗೆಟ್ಟಿ ಹೋಗಿದೆ ಎಂದು ಬಹುಜನ ಸಮಾಜ ಪಕ್ಷದ ವತಿಯಿಂದ ಲೋಕ ಉಪಯೋಗಿ ಇಲಾಖೆ ಸಹಾಯಕ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಲಾಯಿತು. ನಗರದಲ್ಲಿರುವ ಅನೇಕ ಕಡೆ ರಸ್ತೆಯನ್ನು ಸಂಪೂರ್ಣವಾಗಿ ಹದಗೆಟ್ಟಿಹೋಗಿದ್ದು ಸಂಬಂಧ ಪಟ್ಟ ಅಧಿಕಾರಿಗಳು ಯಾವುದೇ ರೀತಿಯ ರಸ್ತೆ ಅಭಿವೃದ್ಧಿ ಕಾಣುತ್ತಿಲ್ಲ ಎಂದು ದೂರಿದ್ದಾರೆ. ರಸ್ತೆಯ ಮೇಲೆ ಗುಂಡಿಗಳು ಬಿದ್ದಿದ್ದು ಅದರ ಮೇಲಿದಂಲೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮತ್ತು ರಾಜಕೀಯ ವ್ಯಕ್ತಿಗಳು ಈ ರಸ್ತೆಯ ಮೂಲಕ ಓಡಾಡುತ್ತಾ ಇದ್ದಾರೆ . ಆದರೆ ರಸ್ತೆ ಸರಿ ಪಡಿಸುವ ಕಾರ್ಯಕೆ ಯಾರು ಮುಂದಾಗುತ್ತಿಲ್ಲ ಎಂದರು. ಇಲ್ಲಿನ ರಾಜಕೀಯ ಪಕ್ಷಗಳಿಗೆ ಜನರ ಓಟು ಮಾತ್ರ ಬೇಕಾಗಿದೆ ಹೊರತು ಜನರ ಅಭಿವೃದ್ಧಿ ಇಲ್ಲ ಎಂದು ಬಹುಜನ ಸಮಾಜ ಪಕ್ಷದ ತಾಲ್ಲೂಕು ಅಧ್ಯಕ್ಷರಾದ ಶಂಕರ ಫುಲೆ ಯವರು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿಗಳಾದ ಅಶೋಕ ಮಂತಾಳಕರ್. ತಾಲೂಕ ಕಾರ್ಯದರ್ಶಿಗಳಾದ ಮಾದೇವ ಗಾಯಕವಾಡ. ಚಂದ್ರಕಾಂತ ಲಂಗಡೆ. ವಿಷ್ಣುಕಾಂತ ಸೂರ್ಯವಂಶಿ. ಸೂರ್ಯಕಾಂತ ಕೆಳಕ್ಕೆ ಸೇರಿದಂತೆ ಇನ್ನಿತರರು ಭಾಗವಹಿಸಿದರು.

## ಮ್ಯಾಗೇರಿಯಲ್ಲಿ ಶ್ಯಾಮಪ್ರಸಾದ ಮುಖರ್ಜಿ ಜನ್ಮದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ಬಿಜೆಪಿ ಮೂಲ ಜನಸಂಘದ ಸಂಸ್ಥಾಪಕ ಡಾ.ಶ್ಯಾಮಪ್ರಸಾದಮುಖರ್ಜಿ ದೇಶದ ಅಖಂಡತೆ ಹಾಗೂ ಏಕತೆಗಾಗಿ ಶ್ರಮಿಸಿದ ಧರ್ಮನಿಷ್ಠ ದೇಶಭಕ್ತರು ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ತಾಲೂಕಿನ ಚಿಕ್ಕಮ್ಯಾಗೇರಿಯಲ್ಲಿ ಸೋಮವಾರ ಭಾರತೀಯ ಜನತಾ ಪಕ್ಷದ ಬಾಗಲಕೋಟೆ ಮತಕ್ಷೇತ್ರದ ಗ್ರಾಮೀಣ ಮಂಡಲ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶ್ಯಾಮಪ್ರಸಾದ ಮುಖರ್ಜಿ ಅವರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಅಭಿವೃದ್ಧಿಗೆ ಮುಖರ್ಜಿ ಅವರ ಸೇವೆ ಅನುಪಮವಾಗಿದ್ದು, ಏಕತೆ, ಸಮಗ್ರತೆ ಹಾಗೂ ಪ್ರಗತಿಗಾಗಿ ತಮ್ಮ ಜೀವನದುದ್ದಕ್ಕೂ ಶ್ರಮಿಸಿದವರು. ಅವರ ಚಿಂತನೆ, ಅದರ್ಶಗಳು ಎಲ್ಲರಿಗೂ ಪ್ರೇರಣೆಯಾಗಿವೆ ಎಂದು ಚರಂತಿಮಠ ಹೇಳಿದರು.

ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಕೊಣ್ಣೂರ ಹಾಗೂ ಸಂಗಣ್ಣ ಸೂಡಿ ಮಾತನಾಡಿ, ಶ್ಯಾಮಪ್ರಸಾದ ಮುಖರ್ಜಿ ಅವರ ತತ್ವಾದರ್ಶಗಳು ಯುವ ಪೀಳಿಗೆಗೆ ಮಾರ್ಗದರ್ಶಿಯಾಗಿವೆ ಎಂದು ಹೇಳಿ, ಅವರ ಬದುಕಿನ ಪಯಣ ತಿಳಿಸಿದರು. ಕಾರ್ಯಕ್ರಮದಲ್ಲಿ ರಾಜು ಮುದೇನೂರ, ಸಿದ್ರಾಮ ಮೇಟಿ, ಹನಮಂತ ಬೆಳಗಲ್ಲ, ಕವಿರಾಜ ಬೆನಕಟ್ಟಿ, ಪ್ರಕಾಶ ಸರಗಣಾಚಾರಿ, ಹುಲ್ಲಪ್ಪ ಹೊಸಗೌಡರ, ರಾಚಯ್ಯ ಹಿರೇಮಠ, ಸುಭಾಸ ರಾಮೋಡಗಿ ಸೇರಿ ಅನೇಕರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಗ್ರಾಮದಲ್ಲಿ ಸಸಿಗಳನ್ನು ನೆಡಲಾಯಿತು.

## ಸಹಕಾರ ಭಾರತಿ ಜಿಲ್ಲಾಧ್ಯಕ್ಷರಾಗಿ ಡಾ.ದಡ್ಡೇನವರ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ಸಹಕಾರ ಭಾರತಿ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ಬಿಜೆಪಿ ಹಿರಿಯ ಧುರೀಣ ಡಾ.ಎಂ.ಎಸ್.ದಡ್ಡೇನವರ ಸೋಮವಾರ ಅಧಿಕಾರ ಸ್ವೀಕರಿಸಿದರು.

ವಿದ್ಯಾಗಿರಿಯ ಸಾಯಿ ಮಂದಿರದ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಸಹಕಾರ ಭಾರತಿ ರಾಜ್ಯಾಧ್ಯಕ್ಷ ಪ್ರಭುದೇವ ಮಾಗನೂರ ಡಾ.ದಡ್ಡೇನವರ ಹಾಗೂ ಪ್ರಧಾನ ಕಾರ್ಯದರ್ಶಿ ಅಶೋಕ ಜಿಗಳೂರ ಆಯ್ಕೆಯ ಘೋಷಣೆ ಮಾಡಿದರು.

ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಪಿ.ಸಿ.ಗದ್ದಿಗೌಡರ, ಕೇಂದ್ರ ಸರ್ಕಾರ ಸಹಕಾರ ಭಾರತೀಯ ಒತ್ತಾಸೆಯ ಮೇರೆಗೆ ಕೃಷಿ ಸಚಿವಾಲಯದ ಜೊತೆಗಿದ್ದ ಸಹಕಾರ ಖಾತೆಯನ್ನು ಸ್ವತಂತ್ರ ಖಾತೆಯನ್ನಾಗಿ ಮಾಡಿ ಸಹಕಾರ ಕ್ಷೇತ್ರವನ್ನು ಬಲಿಷ್ಠಗೊಳ್ಳಿಸುತ್ತಿದೆ ಎಂದು ಹೇಳಿದರು.

ಸಹಕಾರ ಭಾರತಿ ರಾಜ್ಯ ಉಪಾಧ್ಯಕ್ಷ ಜಿ.ಎನ್.ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಸಹಕಾರ ಭಾರತೀಯ ರಚನೆ, ನಡೆದು ಬಂದ ದಾರಿ ವಿವರಿಸಿದರು. ರಾಷ್ಟ್ರೀಯ ಸಂರಕ್ಷಕ ರಮೇಶ ವೈದ್ಯ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ನರಸಿಂಹ ಕಾಮತ್ ಸಹಕಾರ ಭಾರತಿಯ ಕಾರ್ಯ ಚಟುವಟಿಕೆ, ತತ್ವ ಸಿದ್ಧಾಂತದ ಬಗ್ಗೆ ಹೇಳಿದರು.

ರಾಜ್ಯ ಸಹಕಾರ ಭಾರತಿ ಮಾಜಿ ಅಧ್ಯಕ್ಷ ರಾಜಶೇಖರ ಶೀಲವಂತ ಮಾತನಾಡಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸಂಸ್ಥೆ ಮಾಡಿದ ಕಾರ್ಯ ಹಾಗೂ ಮುಂದೆ ಮಾಡಬೇಕಾದ ಕೆಲಸದ ಬಗ್ಗೆ ವಿವರಿಸಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಸಹಕಾರ ಭಾರತೀಯ ಸಂಚಾಲಕಿ ಶೈಲಜಾ ಸಂಗಳದ ವೇದಿಕೆಯಲ್ಲಿದ್ದರು.

## ಯುವನಿಧಿ ಪೋಸ್ಟರ್ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ಯುವನಿಧಿ ಯೋಜನೆಯ ಕುರಿತು ಹೆಚ್ಚಿನ ಮಾಹಿತಿಯನ್ನು ಅಭ್ಯರ್ಥಿಗಳಿಗೆ ಪರಿಚಯಿಸುವ ನಿಟ್ಟಿನಲ್ಲಿ ಜುಲೈ 7 ರಿಂದ ಅಗಸ್ಟ್ 7 ರವರೆಗೆ ವಿಶೇಷ ನೊಂದಣಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಸಂಗಪ್ಪ ಅವರ ಸಮ್ಮುಖದಲ್ಲಿ ಯುವನಿಧಿ ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಜಿಲ್ಲೆಯಲ್ಲಿ ಜೂನ್ 2025 ರವರೆಗೆ 15700 ಅಭ್ಯರ್ಥಿಗಳು ಯುವನಿಧಿ ಯೋಜನೆಗೆ ನೋಂದಾಯಿಸಿಕೊಂಡಿದ್ದು, 13179 ಪದವೀಧರರು ಹಾಗೂ 166 ಡಿಪ್ಲೋಮಾ ಅಭ್ಯರ್ಥಿಗಳು ಯೋಜನೆಯ ಫಲಾನುಭವಿಗಳಾಗಿದ್ದಾರೆ. ಮೇ 2025ರ ವರೆಗೆ 25.70 ಕೋಟಿ ಹಣ ಫಲಾನುಭವಿಗಳ ಖಾತೆಗೆ ಬಿಡುಗಡೆಯಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಶಶಿಧರ ಕುರೇರ, ಉದ್ಯೋಗಾಧಿಕಾರಿಗಳು ಹಾಗೂ ಇನ್ನಿತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ತಿಂಗಳಾಂತ್ಯಕ್ಕೆ 'ಎಲ್ಟು ಮುತ್ತಾ' ಚಿತ್ರ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ನಟಸೂರ್ಯ ನಿರ್ದೇಶನದ 'ಎಲ್ಟು ಮುತ್ತಾ' ಕನ್ನಡ ಚಲನಚಿತ್ರ ತಿಂಗಳಾಂತ್ಯದಲ್ಲಿ ಬಿಡುಗಡೆಯಾಗಲಿದೆ ಎಂದು ನಿರ್ಮಾಪಕ ಸತ್ಯ ಶ್ರೀನಿವಾಸನ್ ತಿಳಿಸಿದರು. ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಹೈ 5 ಸ್ಟುಡಿಯೋ ಹಾಗೂ ಎಸಿಎಫ್ 22 ಪ್ರೊಡಕ್ಸನ್ ಅಡಿಯಲ್ಲಿ ಚಿತ್ರ ನಿರ್ಮಾಣವಾಗಿದ್ದು, ಮಡಿಕೇರಿಯ ಮಣ್ಣಿನ ಕಥೆ ಇದಾಗಿದೆ. ಎರಡು ಪಾತ್ರಗಳ ಮಧ್ಯೆ ಕಥಾ ಹಂದರವಿದ್ದು, ನೈಜ ಘಟನೆಯೊಂದನ್ನು ಆಧಾರವಾಗಿ ಇಟ್ಟುಕೊಂಡು ಈ ಚಿತ್ರ ನಿರೂಪಿತವಾಗಿದೆ ಎಂದರು.

ಸಾವಿನ ಮನೆಯಲ್ಲಿ ಡೋಲು ಹೊಡೆಯುವ ಕುಟುಂಬದ ಸುತ್ತ ಈ ಚಿತ್ರ ಸಾಗುತ್ತದೆ. ಮುತ್ತಾನ ಕಥೆಯನ್ನು ನಿರೂಪಿಸುವ ಎಲ್ಟು ಪಾತ್ರದಲ್ಲಿ ನಿರ್ದೇಶಕ ಸೂರ್ಯ ಅವರೇ ಕಾಣಿಸಿಕೊಂಡಿದ್ದಾರೆ. ಮುತ್ತಾ ಆಗಿ ಶೌರ್ಯಪ್ರತಾಪ್ ನಟಿಸಿದ್ದಾರೆ. ಕಡಿಮೆ ಬಜೆಟ್‌ನಲ್ಲಿ ಚಿತ್ರವನ್ನು ನಿರ್ಮಿಸಲಾಗಿದ್ದು, ಎಲ್ಲರಿಗೂ ಮನಮುಟ್ಟುವಂತೆ ಚಿತ್ರವನ್ನು ಹೆಣೆಯಲಾಗಿದೆ ಎಂದು ಸತ್ಯ ಶ್ರೀನಿವಾಸನ್ ತಿಳಿಸಿದರು.

ಈಗಾಗಲೇ ಚಿತ್ರೀಕರಣ ಪೂರ್ಣಗೊಂಡಿದ್ದು, ಜುಲೈ ಕೊನೆಯ ವಾರದಲ್ಲಿ ಅಥವಾ ಆಗಸ್ಟ ಮೊದಲ ವಾರದಲ್ಲಿ ರಾಜ್ಯಾದ್ಯಂತ ನೂರು ಚಿತ್ರಮಂದಿರಗಳಲ್ಲಿ ಚಿತ್ರ ಬಿಡುಗಡೆಗೊಳ್ಳಲು ಸಜ್ಜಾಗಿದೆ ಎಂದರು. ನಿರ್ದೇಶಕ ಸೂರ್ಯ ಮಾತನಾಡಿ, ಇದು ನನ್ನ ಮೊದಲ ನಿರ್ದೇಶನದ ಚಿತ್ರ. ಮಡಿಕೇರಿ ಸುತ್ತಮುತ್ತ ಬಹುತೇಕ ಚಿತ್ರೀಕರಣವಾಗಿದ್ದು, ಕನಕಪುರದಲ್ಲಿಯೂ ಸಹಿತ ಚಿತ್ರೀಕರಣ ನಡೆದಿದೆ. ಈಗಾಗಲೇ ಹುಬ್ಬಳ್ಳಿಯಲ್ಲಿ ಆಡಿಯೋ ಬಿಡುಗಡೆ ಮಾಡಿದ್ದು, ಎಲ್ಟು ಮುತ್ತಾ ಚಿತ್ರದಲ್ಲಿ ಯುವನಟ–ನಟಿಯರು ನಟಿಸಿದ್ದಾರೆ ಎಂದು ಹೇಳಿದರು.

ಇನ್ನೊಬ್ಬ ನಾಯಕ ಶೌರ್ಯಪ್ರತಾಪ ಮಾತನಾಡಿ, ನಾನೂ ಈ ಚಿತ್ರದಲ್ಲಿ ನಟ, ಸಹ ನಿರ್ದೇಶಕ ಹಾಗೂ ಬರಹಗಾರನಾಗಿ ಕೆಲಸ ಮಾಡಿದ್ದೇನೆ. ಸಂಗೀತ ನಿರ್ದೇಶಕ ಪ್ರಸನ್ ಕೇಶವ್ ಸಂಯೋಜನೆ ಮಾಡಿದ್ದು, ಚಿತ್ರದ 5 ಹಾಡುಗಳ ಜೊತೆಗೆ ಹಿನ್ನೆಲೆ ಸಂಗೀತ ನೀಡಿದ್ದೇನೆ. ಮೇಯಪ್ಪ ಭಾಸ್ಕರ್ ಛಾಯಾಗ್ರಹಣ ನೀಡಿದ್ದು, ರೋಹನ್ ಆರ್ಯ ಚಿತ್ರದ ಕಾರ್ಯಕಾರಿ ನಿರ್ಮಾಪಕ ಆಗಿದ್ದಾರೆ. ನಾಯಕಿಯಾಗಿ ಪ್ರಿಯಾಂಕಾ ಮಲಾಲಿ ನಟಿಸಿದ್ದಾರೆ ಎಂದು ತಿಳಿಸಿದರು.

## ನಲ್ ಜಲ್ ಮಿತ್ರ ಯೋಜನೆ–ಮಹಿಳೆಯರಿಗೆ ತರಬೇತಿ ಸ್ವಾವಲಂಬಿ ಬದುಕಿಗೆ ಕೌಶಲ್ಯ ತರಬೇತಿ ಸಹಾಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ಮಹಿಳೆಯರು ಸ್ವಾವಲಂಬಿ ಬದುಕು ಸಾಗಿಸಲು ನೀರು ವಿತರಣಾ ನಿರ್ವಾಹಕರ ಬಹು ಕೌಶಲ್ಯ ತರಬೇತಿಯು ಸಹಾಯವಾಗಲಿದೆ ಎಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಎಸ್.ಎನ್.ಕಾಂಬಳೆ ಹೇಳಿದರು.

ನವನಗರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸಭಾಭವನದಲ್ಲಿ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ, ರಾಜ್ಯ ಕೌಶಲ್ಯಾಭಿವೃದ್ಧಿ ನಿಗಮ, ಡೇ–ಎನ್.ಆರ್.ಎಲ್.ಎಂ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಯೋಗದಲ್ಲಿ ನಲ್ ಜಲ್ ಮಿತ್ರ ಯೋಜನೆಯಡಿ ಹಮ್ಮಿಕೊಂಡ 15 ದಿನಗಳ ಬಹು ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ಅಭಿವೃದ್ಧಿಗೆ ಪೂರಕವಾಗಿ ಸರಕಾರ ಯೋಜನೆಗಳನ್ನು ರೂಪಿಸುತ್ತಿದ್ದು, ಈ ಯೋಜನೆಗಳ ಸದುಪಯೋಗಪಡಿಸಿಕೊಳ್ಳಬೇಕು. ತರಬೇತಿ ಪಡೆದ ನಂತರ ಗ್ರಾಮ ಪಂಚಾಯತ ಮಟ್ಟದಲ್ಲಿ ನೀರು ವಿತರಣಾ ನಿರ್ವಾಹಕರಾಗಿ ಕೆಲಸ ಮಾಡಬೇಕಾಗುತ್ತದೆ. ಆದ್ದರಿಂದ 15 ದಿನಗಳವರೆಗೆ ನಡೆಯುವ ಬಹು ಕೌಶಲ್ಯ ತರಬೇತಿಯ ಲಾಭವನ್ನು ಮಹಿಳೆಯರು ಪಡೆಯುವದರ ಜೊತೆಗೆ ಇತರೆ ಮಹಿಳೆಯರಿಗೆ ಸ್ಫೂರ್ತಿಯಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ವಿ.ಎಸ್.ಹಿರೇಮಠ ಮಾತನಾಡಿ, ಮಹಿಳೆಯರು ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದು, ಅವರಿಗೂ ಸಹ ನೀರು ವಿತರಣಾ ನಿರ್ವಾಹಕರ ಕಾರ್ಯವನ್ನು ವಹಿಸಲು ಸ್ವಸಹಾಯ ಗುಂಪುಗಳಿಗೆ ತರಬೇತಿ ನೀಡಲು ಜಿಲ್ಲಾ ಪಂಚಾಯತ ಮುಂದಾಗಿದೆ. ಇದರಿಂದ ಗ್ರಾಮೀಣ ಮಟ್ಟದಲ್ಲಿ ನಳದ ನೀರಿನ ಪೈಪ್‌ಲೈನ್‌ಗಳ ರಿಪೇರಿ ಕಾರ್ಯ ಮಾಡಬಹುದಾಗಿದೆ. ಇದಕ್ಕಾಗಿ ತರಬೇತಿದಾರರು ಇದ್ದಾರೆಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಗುರುಪಾದ ಹಿರೇಮಠ, ನಲ್ ಜಲ ಮಿತ್ರ ಯೋಜನೆಯಡಿ 15 ದಿನಗಳ ತರಬೇತಿ ನೀಡಿ ನಂತರ ಗ್ರಾಮ ಪಂಚಾಯತ ಮಟ್ಟದಲ್ಲಿ ತರಬೇತಿ ನೀಡಲಾಗುತ್ತಿದೆ. ಇದರ ನಂತರ ಪರೀಕ್ಷೆ ತೆಗೆದುಕೊಂಡು ಪ್ರಮಾಣ ಪತ್ರ ನೀಡಲಾಗುತ್ತದೆ. ಪ್ರಮಾಣ ಪತ್ರದೊಂದಿಗೆ ಟೂಲ್‌ಕಿಟ್ ಹಾಗೂ ಸಮವಸ್ತ್ರ ನೀಡಲಾಗುತ್ತದೆ. ತರಬೇತಿ ಅವಧಿಯಲ್ಲಿ ಸ್ಟೈಪಂಡ್ ಸಹ ನೀಡಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ, ಸಹಾಯಕ ಯೋಜನಾ ನಿರ್ದೇಶಕ ಭೀಮಪ್ಪ ತಳವಾರ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಅಧಿಕಾರಿ ಎ.ಎ.ಅತ್ತಾರ ಇತರರು ಉಪಸ್ಥಿತರಿದ್ದರು.

## ಕೇಂದ್ರ ಸಚಿವ ಸೋಮಣ್ಣಗೆ ಮನವಿ

### ವಿಜಯಪುರ ರೈಲು ನಿಲ್ದಾಣಕ್ಕೆ ಡಾ.ಅಂಬೇಡ್ಕರ ಹೆಸರಿಡಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ವಿಜಯಪುರ ರೈಲು ನಿಲ್ದಾಣಕ್ಕೆ ಡಾ.ಬಿ.ಆರ್. ಅಂಬೇಡ್ಕರ ಹೆಸರಿಡುವಂತೆ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ಕೇಂದ್ರ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದೆ.

ಬಾಗಲಕೋಟ ಜಿಲ್ಲಾಧಿಕಾರಿಗಳ ಮೂಲಕ ಸಚಿವರಿಗೆ ಈ ಮನವಿ ಸಲ್ಲಿಸಿರುವ ಛಲವಾದಿ ಮಹಾಸಭಾ, ಡಾ.ಬಿ.ಆರ್.ಅಂಬೇಡ್ಕರ್ ಅವರು ದಿನಾಂಕ 1939ರಲ್ಲಿ ವಿಜಯಪುರ ನಗರಕ್ಕೆ ಭೇಟಿ ನೀಡಿದ ಐತಿಹಾಸಿಕ ದಿನದ ಸವಿನೆನಪಿಗೋಸ್ಕರ ವಿಜಯಪುರ ರೈಲು ನಿಲ್ದಾಣಕ್ಕೆ ಅವರ ಹೆಸರನ್ನು ನಾಮಕರಣಗೊಳಿಸುವಂತೆ ಬಾಗಲಕೋಟ ಜಿಲ್ಲಾ ಘಟಕ ಅವಿಭಜಿತ ವಿಜಯಪುರ ಜಿಲ್ಲೆಯ ಸಮಸ್ತ ದಲಿತರ ಪರವಾಗಿ ಮನವಿ ಮಾಡಿಕೊಂಡಿದೆ. ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಛಲವಾದಿ ಮಹಾಸಭಾ ಜಿಲ್ಲಾ ಅಧ್ಯಕ್ಷ ಪ್ರೇಮನಾಥ ಗರಸಂಗಿ ಹಾಗೂ ಪದಾಧಿಕಾರಿಗಳು ಮನವಿ ಮಾಡಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಬಿ.ಗಸ್ತಿ, ಖಜಾಂಚಿ ಹುಲಗೆಪ್ಪ ಹೊದ್ಲೂರ, ಹೆಚ್.ಡಿ.ಹೊಸಮನಿ, ರಾಜು ಕಾಂಬಳೆ ಮೊದಲಾದವರು ಉಪಸ್ಥಿತರಿದ್ದರು. ಇದೇ ಸಮಯದಲ್ಲಿ ಜಿಲ್ಲೆಗೆ ನೂತನವಾಗಿ ಜಿಲ್ಲಾಧಿಕಾರಿಯಾಗಿ ಬಂದಿರುವ ಸಂಗಪ್ಪ ಅವರನ್ನು ಛಲವಾದಿ ಮಹಾಸಭಾದಿಂದ ಗೌರವಿಸಲಾಯಿತು.




ಬೀದರ:ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಅಲೆ ಮಾರಿ ಅರೆ ಅಲೆಮಾರಿ ಸಲಹಾ ಸಮಿತಿ ಸಭೆಯನ್ನು ಮುಂಜಾನೆ 11:00ಗೆ ಆಹ್ವಾನಿಸಲಾಗಿತ್ತು. ಅಧಿಕಾರಿಗಳ ದೂರವಾಣಿ ಸಂದೇಶದಂತೆ ಸದರಿ ಸಭೆಯನ್ನು ಮುಂಜಾನೆ 10:00 ಗಂಟೆಗೆ ಜರುಗಿತು. ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ನಿಕಟಪೂರ್ವ ರಾಜ್ಯ ಉಪಾಧ್ಯಕ್ಷರಾದ ಡಾ.ಸಿದ್ರಾಮ್ ವಾಘಮಾರೆ ರವರು ಸನ್ಮಾನಿಸಿದರು. (ಮಲ್ಲಮ್ಮ ನುಡಿ ಚಿತ್ರ).

## ಯುವನಿಧಿ ಯೋಜನೆ: 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವನಿಧಿ ಯೋಜನೆಯ ಫಲಾನುಭವಿಗಳು ಪ್ರಸ್ತುತ ಮಾಸಿಕವಾಗಿ ದಾಖಲಿಸುತ್ತಿರುವ ಸ್ವಯಂ ಘೋಷಣೆಯ ಬದಲಾಗಿ ಇನ್ನು ಮುಂದೆ ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಸೂಚಿಸಲಾಗಿದೆ.

ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಯಾವುದೇ ಅಂತಿಮ ದಿನಾಂಕ ಇರುವುದಿಲ್ಲ. ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಚಾಲನೆಯಲ್ಲಿರುತ್ತದೆ. ಆದಕಾರಣ 2023 ಅಥವಾ 2024ನೇ ಸಾಲಿನಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆ–ಯಾಗಿ ಅರ್ಜಿ ಸಲ್ಲಿಸದೇ ಇರುವ ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ http://sevasindhugs.karnataka.gov.in ನಲ್ಲಿ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಿದ ಎರಡು ದಿನಗಳ ನಂತರ ಡಿಡಿಪಿಐ ಇಲಾಖೆಯಲಲಿ ಎಸ್‌ಎಸ್‌ಎಲ್‌ಸಿ, ಡಿಡಿಪಿಯು ಇಲಾಖೆಯಲ್ಲಿ ಪಿಯುಸಿ ಮತ್ತು ಡಿಇಇಓ ಇಲಾಖೆಯಲ್ಲಿ ಡಿಪ್ಲೊಮಾ/ಪದವಿ ಮೂಲ ಅಂಕಪಟ್ಟಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ಮಾಡಿಕೊಳ್ಳಬೇಕು. ಈ ಮೂರು ಇಲಾಖೆಗಳು ಜಿಲ್ಲಾಡಳಿತ ಭವನದ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತವೆ.

ಹೆಚ್ಚಿನ ಮಾಹಿತಿಗಾಗಿ ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕೊಪ್ಪಳ ಯುವನಿಧಿ ಸಹಾಯವಾಣಿ ಸಂ–ಖ್ಯೆ: 18005997154 ನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೃಥ್ವಿ ಅಂಬಿಗೇರಗೆ ಶುಭ ಹಾರೈಕೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.7–ದೇಶದ ವಿವಿಧೆಡೆಗಳಲ್ಲಿರುವ 12 ಜ್ಯೋತಿರ್ಲಿಂಗ ದರ್ಶನ ಪಡೆಯಲು ಸೈಕಲ್ ಮೇಲೆ ಪ್ರಯಾಣ ಬೆಳೆಸಿದ ನಗರದ ಪೃಥ್ವಿ ಮಾರುತಿ ಅಂಬಿಗೇರ ಅವರನ್ನು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಸೋಮವಾರ ಬೀಳ್ಕೊಟ್ಟರು.

15 ಸಾವಿರ ಕಿಲೋ ಮೀಟರ ಸಂಚಾರ ಮಾಡುತ್ತಿರುವ ಪೃಥ್ವಿ ಅಂಬಿಗೇರ ಅವರ ಪ್ರಯಾಣ ಸುಖಕರವಾಗಿರಲಿ ಎಂದು ಪೂಜಾರ ಹಾಗೂ ಪೃಥ್ವಿ ಸ್ನೇಹಿತರು, ನಗರದ ಜನತೆ ಶುಭ ಕೋರಿದರು.

ಸಂಗನಗೌಡ ಗೌಡರ, ಕರವೇ(ಪ್ರವೀಣಶೆಟ್ಟಿ ಬಣ) ಜಿಲ್ಲಾಧ್ಯಕ್ಷ ಮುತ್ತುರಾಜ ಅರಗಿಣಿಶೆಟ್ಟಿ, ಕಾರ್ಯಕರ್ತರು ಇದ್ದರು.

**CITATION**

**IN THE COURT OF THE PRL. CIVIL JUDGE AND JMFC HUMNABAD AT HUMNABAD**

**CRL.MISC.NO. 613/2025**

PETITIONERS :-

1. Sangamma w/o Hanmanth age. 52 R/o Sindhankera
2. Maruti S/o Tukkappa Age. 51, Occ: Agri, R/o Sindhankera
3. Shivamma D/o Tukkappa Age, 77, R/o Sindhankera
4. Mallamma D/o Tukkappa Age. 70 R/o Sindhankera

All R/o Sindhankera Tq. Chitguppa Dist. Bidar

RESPONDENT:-

The Registrar of Birth and Death-through Chief Officer, Tahasildhar., Humnabad.

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of their father-In-Law. LATE Tukkappa S/O laxman Who died on dated 25-11-2004 at Sindhankera The petitioners claiming the death certificate of deceased Sangamma & others for transfer of property and other official purpose and home record. Therefore it is hereby proclaimed that if any person or persons have got any objection in this regard he/they may approach to this Honorable court on 19/07/2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 23 day of JUNE -2025.

//By order of the court//
Chief Ministerial Officer,
Prl. Civil Judge and JMFC court Humnabad

**CITATION**

**IN THE COURT OF THE PRL. CIVIL JUDGE AND JMFC HUMNABAD AT HUMNABAD**

**CRL.MISC.NO. 612/2025**

PETITIONERS :-

1. Nabi sab S/o Late Dadu Miya age. 57 R/o Kappargaon
2. Maheboob Sab S/o Dadu Miya Age. 68, Occ: Agri, R/o Kappargaon
3. Jamrudabee w/o Mainuddin Age, 74, R/o Kappargaon
4. Mamalabi D/o Dadu Miya Age. 7 R/o Kappargaon
5. Munwar Bee D/o Dadu Miya Age. 67 R/o Kappargaon

All R/o Kappargaon Tq. Humnabad Dist. Bidar

RESPONDENT:-

The Registrar of Birth and Death-through Chief Officer, Tahasildhar., Humnabad.

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of their father LATE Dadu Miya S/O Maheboob Sab Who died on dated 15-05-1995 at Kappargaon The petitioners claiming the death certificate of deceased Sangamma & others for transfer of property and other official purpose and home record. Therefore it is hereby proclaimed that if any person or persons have got any objection in this regard he/they may approach to this Honorable court on 19/07/2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 24 day of JUNE -2025.

//By order of the court//
Chief Ministerial Officer,
Prl. Civil Judge and JMFC court Humnabad

